ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೮೩

**ಪಟ್ಟಿ – ೨೧**

# ಕರ್ನಾಟಕ ವಿಧಾನ ಪರಿಷತ್ತು

**ನೂರ ನಲವತ್ತಮೂರನೆಯ ಅಧಿವೇಶನ**
**(ಮುಂದುವರೆದ ಉಪವೇಶನ)**

**ಶುಕ್ರವಾರ, ದಿನಾಂಕ : ೨೬ನೇ ಮಾರ್ಚ್, ೨೦೨೧**

---

## ಸಮೂಹ – V

೧. ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು.

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

೩. ಕೃಷಿ ಸಚಿವರು.

೪. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು.

೫. ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು.

೬. ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಹಜ್ ಮತ್ತು ವಕ್ಫ್ ಸಚಿವರು.

೭. ತೋಟಗಾರಿಕೆ ಮತ್ತು ರೇಷ್ಮೆ ಸಚಿವರು.

---

## ಬೀದರ್ ಜಿಲ್ಲೆಯಲ್ಲಿ ಸುವರ್ಣ ಗ್ರಾಮ ಯೋಜನೆ ಹಾಗೂ ಗ್ರಾಮ ವಿಕಾಸ ಯೋಜನೆಗಳ ಕುರಿತು

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೮೯೧ (೨೨೮೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಸುವರ್ಣ ಗ್ರಾಮ ವಿಕಾಸ ಯೋಜನೆಯಡಿಯಲ್ಲಿ ಒದಗಿಸಿರುವ ಅನುದಾನ ಎಷ್ಟು ; ಯಾವ ಗ್ರಾಮಗಳು ಆಯ್ಕೆಗೊಂಡಿರುತ್ತವೆ ಹಾಗೂ ಕ್ರಿಯಾ ಯೋಜನೆ ಪ್ರಕಾರ ತೆಗೆದುಕೊಂಡ ಕಾಮಗಾರಿಗಳಾವುವು ; (ವಿವರ ನೀಡುವುದು)

(ಆ) ಸದರಿ ಕಾಮಗಾರಿಗಳನ್ನು ಯಾವ ಏಜೆನ್ಸಿಯ ಮೂಲಕ ಅನುಷ್ಠಾನಗೊಳಿಸಲಾಗಿದೆ ಹಾಗೂ ಈ ಕಾಮಗಾರಿಗಳ ಗುಣಮಟ್ಟವನ್ನು ನಿರ್ವಹಣೆ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಕಾಮಗಾರಿಗಳನ್ನು ಕೈಗೊಂಡ ಏಜೆನ್ಸಿಯವರ ಮೇಲೆ ಕೈಗೊಂಡ ಕ್ರಮವೇನು ? (ಸಂಪೂರ್ಣ ವಿವರ ನೀಡುವುದು)

## ಬೀದರ್ ಜಿಲ್ಲೆಯಲ್ಲಿ ಬಸ್ ನಿಲ್ದಾಣದಲ್ಲಿರುವ ವಾಣಿಜ್ಯ ಮಳಿಗೆಗಳ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೮೯೨ (೨೨೮೪) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿರುವ ಬಸ್ ನಿಲ್ದಾಣದಲ್ಲಿ ಎಷ್ಟು ವಾಣಿಜ್ಯ ಮಳಿಗೆಗಳಿವೆ ; (ತಾಲ್ಲೂಕುವಾರು ವಿವರವಾದ ಮಾಹಿತಿ ನೀಡುವುದು)

(ಆ) ಈ ವಾಣಿಜ್ಯ ಮಳಿಗೆಗಳು ಹರಾಜು ಅಥವಾ ಟೆಂಡರು ಮೂಲಕ ಪ್ರಕ್ರಿಯೆ ನಡೆದಿದೆಯೇ ; ಆಗಿದ್ದರೆ, ತಾಲ್ಲೂಕುವಾರು ಮಾಹಿತಿ ನೀಡುವುದು ;

(ಇ) ಈ ವಾಣಿಜ್ಯ ಮಳಿಗೆಗಳಿಂದ ಸರ್ಕಾರಕ್ಕೆ ಬರುವ ಆದಾಯವೆಷ್ಟು ?

## ಬೀದರ್ ಜಿಲ್ಲೆಯಲ್ಲಿ ತೋಟಗಾರಿಕೆ ಇಲಾಖೆಯಿಂದ ನಡೆಯುತ್ತಿರುವ ವಿವಿಧ ಯೋಜನೆಗಳ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೮೯೩ (೨೨೮೧) ಮಾನ್ಯ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಐದು ವರ್ಷಗಳಿಂದ ಹನಿ ನೀರಾವರಿ ಯೋಜನೆಯಡಿಯಲ್ಲಿ ಬೀದರ್ ಜಿಲ್ಲೆಗೆ ಬಿಡುಗಡೆಯಾಗಿರುವ ಅನುದಾನವೆಷ್ಟು ಹಾಗೂ ಎಷ್ಟು ಹೆಕ್ಟೇರ್‌ಗಳಲ್ಲಿ ಹನಿ ನೀರಾವರಿ ಅಳವಡಿಸಲಾಗಿದೆ ; ಎಷ್ಟು ಫಲಾನುಭವಿಗಳಿಗೆ ಈ ಯೋಜನೆಯ ಸೌಲಭ್ಯಗಳು ಒದಗಿಸಲಾಗಿದೆ ; (ತಾಲ್ಲೂಕುವಾರು, ಫಲಾನುಭವಿಗಳ ವಿವರವಾದ ಮಾಹಿತಿ ನೀಡುವುದು)

(ಆ) ಕಳೆದ ಐದು ವರ್ಷಗಳಿಂದ ತುಂತುರು ನೀರಾವರಿ ಯೋಜನೆಯಡಿಯಲ್ಲಿ ಬೀದರ್ ಜಿಲ್ಲೆಗೆ ಬಿಡುಗಡೆಯಾಗಿರುವ ಅನುದಾನವೆಷ್ಟು ; ಹಾಗೂ ಎಷ್ಟು ಹೆಕ್ಟೇರ್‌ಗಳಲ್ಲಿ ತುಂತುರು ನೀರಾವರಿ ಅಳವಡಿಸಲಾಗಿದೆ ; ಎಷ್ಟು ಫಲಾನುಭವಿಗಳಿಗೆ ಈ ಯೋಜನೆಯ ಸೌಲಭ್ಯಗಳು ಒದಗಿಸಲಾಗಿದೆ ; (ತಾಲ್ಲೂಕುವಾರು ಫಲಾನುಭವಿಗಳ ವಿವರವಾದ ಮಾಹಿತಿ ನೀಡುವುದು)

(ಇ) ಜಿಲ್ಲೆಯಲ್ಲಿ ಪಾಲಿ ಮನೆ, ಮತ್ತು ಹಸಿರು ಮನೆ ಹಾಗೂ ಹೈಡ್ರೋ ಫೋನಿಕ್ಸ್‌ಗಳನ್ನು ಎಷ್ಟು ನಿರ್ಮಿಸಲಾಗಿದೆ ? (ತಾಲ್ಲೂಕುವಾರು ಫಲಾನುಭವಿಗಳ ವಿವರವಾದ ಮಾಹಿತಿ ನೀಡುವುದು)

## ಬೀದರ್ ಜಿಲ್ಲೆಯಲ್ಲಿ Karnataka State Womens Development Corporation ಯೋಜನೆಗಳ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೮೯೪ (೨೨೮೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಇಲ್ಲಿಯವರೆಗೆ ನಡೆದಿರುವ ಮಹಿಳಾ ತರಬೇತಿ ಕಾರ್ಯಕ್ರಮಗಳು ಎಷ್ಟು ; ಅದಕ್ಕೆ ಬಿಡುಗಡೆಯಾದ ಅನುದಾನ ಎಷ್ಟು ; (ಮಾಹಿತಿ ನೀಡುವುದು)

(ಆ) ಜಿಲ್ಲೆಯಲ್ಲಿ ಚೇತನ, ಅಭಿವೃದ್ಧಿ ಮೈಕ್ರೋ ಕ್ರೆಡಿಟ್ ಯೋಜನೆಯಡಿಯಲ್ಲಿ ಕಳೆದ ಐದು ವರ್ಷಗಳಲ್ಲಿ ಎಷ್ಟು ಫಲಾನುಭವಿಗಳಿಗೆ ಈ ಸೌಲಭ್ಯ ಒದಗಿಸಲಾಗಿದೆ ; (ಒದಗಿಸಿದ್ದರೆ ವಿವರವಾದ ಮಾಹಿತಿ ನೀಡುವುದು)

(ಇ) ಬೀದರ್ ಜಿಲ್ಲೆಯಲ್ಲಿ ಲಿಂಗತ್ವ ಅಲ್ಪಸಂಖ್ಯಾತರ ಸಂಖ್ಯೆ ಎಷ್ಟು ; ಅವರ ಪುನರ್ವಸತಿಗೆ ಬಿಡುಗಡೆಯಾದ ಅನುದಾನ ಎಷ್ಟು ; (ವಿವರವಾದ ಮಾಹಿತಿ ನೀಡುವುದು)

(ಈ) ಜಿಲ್ಲೆಯಲ್ಲಿ ಮಹಿಳಾ ಉದ್ದಿಮೆಗಳಿಗೆ ಬಡ್ಡಿ ಸಹಾಯ ಧನ ಯೋಜನೆಯಡಿಯಲ್ಲಿ ಕಳೆದ ಐದು ವರ್ಷಗಳಿಂದ ಎಷ್ಟು ಮಹಿಳೆಯರಿಗೆ ಈ ಯೋಜನೆಯಡಿಯಲ್ಲಿ ಸೌಲಭ್ಯ ಒದಗಿಸಲಾಗಿದೆ ; (ವಿವರವಾದ ಮಾಹಿತಿ ನೀಡುವುದು)

(ಉ) ೨೦೧೮-೧೯ ರಿಂದ ೨೦೨೦-೨೧ನೇ ಸಾಲಿನ ಬೀದರ್ ಜಿಲ್ಲೆಯ ಉದ್ಯೋಗಿನಿ ಯೋಜನೆಯಡಿಯಲ್ಲಿ ಅನುಷ್ಠಾನಗೊಳಿಸಲು ಫಲಾನುಭವಿಗಳ ಆಯ್ಕೆ ಪ್ರಕ್ರಿಯೆ, ಆಯ್ಕೆ ಸಮಿತಿಯ ಸಭೆಯ, ದಿನಾಂಕ ಹಾಗೂ ಸ್ಥಳ ಹಾಗೂ ಆಹ್ವಾನಿಸಿರುವ ಸಭೆಯ ನೋಟಿಸ್ ಪ್ರತಿಗಳು ಹಾಗೂ ಸಭೆಯ ನಡವಳಿಗಳ (ಪ್ರೊಸಿಡಿಂಗ್ ಕಾಪಿ) ಮಾಹಿತಿ ಒದಗಿಸಲು ಕ್ರಮ ಕೈಗೊಳ್ಳುವುದು ?

## ಗ್ರೇಡ್-೨ ಗ್ರಾಮ ಪಂಚಾಯಿತಿಗಳನ್ನು ಮೇಲ್ದರ್ಜೆಗೇರಿಸುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೮೯೫ (೨೨೯೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೧ರ ಜನಸಂಖ್ಯೆ ಆಧಾರದಂತೆ ಗ್ರಾಮ ಪಂಚಾಯಿತಿಗಳನ್ನು ಮೇಲ್ದರ್ಜೆಗೇರಿಸುವ (ಗ್ರೇಡ್-೨ ರಿಂದ ಗ್ರೇಡ್-೧) ಪ್ರಸ್ತಾವನೆಯು ಸರ್ಕಾರದ ಮುಂದೆ ಇದೆಯೇ ;

(ಆ) ಈ ಪ್ರಸ್ತಾವನೆಯು ಈಗಾಗಲೇ ಆರ್ಥಿಕ ಇಲಾಖೆಯಲ್ಲಿ ನೆನೆಗುದಿಗೆ ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, (ಗ್ರೇಡ್-೨ ಪಂಚಾಯಿತಿಯಿಂದ ಗ್ರೇಡ್-೧ ಗೆ) ಗ್ರಾಮ ಪಂಚಾಯಿತಿಗಳನ್ನು ಮೇಲ್ದರ್ಜೆಗೇರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ; (ವಿವರ ನೀಡುವುದು)

(ಈ) ಮಂಡ್ಯ ಜಿಲ್ಲೆ ವ್ಯಾಪ್ತಿಯಲ್ಲಿ ಒಟ್ಟಾರೆ ಎಷ್ಟು ಗ್ರೇಡ್-೨ ಮತ್ತು ಗ್ರೇಡ್-೧ ಪಂಚಾಯಿತಿಗಳು ಇವೆ ; (ತಾಲ್ಲೂಕುವಾರು ವಿವರ ನೀಡುವುದು)

(ಉ) ಕಳೆದ ಮೂರು ವರ್ಷಗಳಲ್ಲಿ ಗ್ರೇಡ್-೧ ಮತ್ತು ಗ್ರೇಡ್-೨ ಪಂಚಾಯಿತಿಗಳಿಗೆ ಸರ್ಕಾರದಿಂದ ನೀಡುವ ಅನುದಾನ ಎಷ್ಟು ? (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

## ಮಣ್ಣಿನ ಪರೀಕ್ಷಾ ಕೇಂದ್ರ ಸ್ಥಾಪಿಸುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೯೬ (೨೨೯೬) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಣ್ಣಿನ ಫಲವತ್ತತೆಗೆ ಸಂಬಂಧಿಸಿದಂತೆ ಕೃಷಿ ಭೂಮಿ ಗರಿಷ್ಠ ಸಮಸ್ಯೆಯನ್ನು ಎದುರಿಸುತ್ತಿರುವ ಜಿಲ್ಲೆಗಳು ಯಾವುವು ;

(ಆ) ಈ ಜಿಲ್ಲೆಗಳಲ್ಲಿ ಮಣ್ಣಿನ ಫಲವತ್ತತೆ ಬಗ್ಗೆ ಮಣ್ಣಿನ ಆರೋಗ್ಯ ಕಾರ್ಡ್‌ಗಳನ್ನು ಎಷ್ಟು ಮಂದಿ ರೈತರಿಗೆ ವಿತರಿಸಲಾಗಿದೆ ; (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

(ಇ) ಮಂಡ್ಯ ಜಿಲ್ಲೆಯಲ್ಲಿ ಸ್ಥಾಪಿಸಲಾದ ಮಣ್ಣಿನ ಪರೀಕ್ಷಾ ಪ್ರಯೋಗಾಲಯಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಕಳೆದ ಮೂರು ವರ್ಷಗಳಲ್ಲಿ ಮಂಡ್ಯ ಜಿಲ್ಲೆಯಲ್ಲಿ ಮಣ್ಣಿನ ಪರೀಕ್ಷಾ ಆರೋಗ್ಯ ಕಾರ್ಡ್‌ಗಳನ್ನು ಎಷ್ಟು ಮಂದಿ ರೈತರಿಗೆ ವಿತರಿಸಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಉ) ಈ ಜಿಲ್ಲೆಯಲ್ಲಿ ಸಂಚಾರಿ ಮಣ್ಣಿನ ಪರೀಕ್ಷಾ ಪ್ರಯೋಗಾಲಯಗಳನ್ನು ಸ್ಥಾಪಿಸಲಾಗಿದೆಯೇ ; ಹಾಗಿದ್ದಲ್ಲಿ, ಅವುಗಳ ಸಂಖ್ಯೆ ಎಷ್ಟು ; ಇಲ್ಲದಿದ್ದಲ್ಲಿ, ಸ್ಥಾಪಿಸುವ ಉದ್ದೇಶ ಸರ್ಕಾರದ ಮುಂದೆ ಇದೆಯೇ ?

## ಕೃಷಿ ಸಮ್ಮಾನ್ ನಿಧಿ ಯೋಜನೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೯೭ (೨೨೯೫) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಧಾನ ಮಂತ್ರಿ ಕೃಷಿ ಸಮ್ಮಾನ್ ನಿಧಿ ಯೋಜನೆಯನ್ನು ರಾಜ್ಯದಲ್ಲಿ ಜಾರಿಗೆ ತರಲಾಗಿದೆಯೇ ; ಹಾಗಿದ್ದಲ್ಲಿ, ಕಳೆದ ಮೂರು ವರ್ಷಗಳಿಂದ ಕೇಂದ್ರ ಮತ್ತು ರಾಜ್ಯದಿಂದ ನೀಡಿರುವ ಪ್ರೋತ್ಸಾಹ ಧನವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಮಂಡ್ಯ ಜಿಲ್ಲೆಯಲ್ಲಿ ಇದುವರೆವಿಗೂ ಈ ಯೋಜನೆಯಿಂದ ಎಷ್ಟು ಜನ ರೈತರಿಗೆ ಪ್ರಯೋಜನವಾಗಿದೆ ; ಕಳೆದ ಮೂರು ವರ್ಷಗಳ ಮಾಹಿತಿಯನ್ನು ತಾಲ್ಲೂಕುವಾರು ನೀಡುವುದು ;

(ಇ) ರಾಜ್ಯದಿಂದ ನೀಡಲಾಗುತ್ತಿರುವ ಪ್ರೋತ್ಸಾಹ ಧನವನ್ನು ಕೇಂದ್ರ ಸರ್ಕಾರದ ರೀತಿಯಲ್ಲೇ ರೈತರ ಬ್ಯಾಂಕ್ ಖಾತೆಗಳಿಗೆ ನೇರವಾಗಿ ವರ್ಗಾವಣೆ ಮಾಡಲಾಗುತ್ತಿದೆಯೇ ; (ತಾಲ್ಲೂಕುವಾರು ವಿವರ ನೀಡುವುದು)

(ಈ) ರಾಜ್ಯದಿಂದ ನೀಡಲಾಗುತ್ತಿರುವ ಪ್ರೋತ್ಸಾಹ ಧನದಲ್ಲಿ ಬಾಕಿ ಉಳಿಸಲಾಗಿದೆಯೇ ? (ತಾಲ್ಲೂಕುವಾರು ವಿವರಗಳನ್ನು ನೀಡುವುದು)

## ಗ್ರಾಮಾಂತರ ಪ್ರದೇಶಗಳಿಗೆ ಸಾರಿಗೆ ಬಸ್ ಸಂಚಾರ ವ್ಯವಸ್ಥೆ ಕಲ್ಪಿಸುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೯೮ (೨೨೯೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆ, ನಾಗಮಂಗಲ ತಾಲ್ಲೂಕು ವ್ಯಾಪ್ತಿಯ ಗ್ರಾಮೀಣ ಭಾಗದಲ್ಲಿ ಸಮರ್ಪಕವಾಗಿ ಬಸ್ ಸಂಚಾರ ವ್ಯವಸ್ಥೆಯಿಲ್ಲದೆ ಸಾರ್ವಜನಿಕರು, ವಿದ್ಯಾರ್ಥಿಗಳು, ಕೂಲಿ–ಕಾರ್ಮಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವುದು ಯಾವಾಗ ; (ವಿವರ ನೀಡುವುದು)

(ಇ) ನಾಗಮಂಗಲ ತಾಲ್ಲೂಕಿನ ಗ್ರಾಮೀಣ ಭಾಗಗಳಿಗೆ ಹೊಸದಾಗಿ ಬಸ್ ಸಂಚಾರ ವ್ಯವಸ್ಥೆಗೆ ಯಾವಾಗ ಕ್ರಮ ಕೈಗೊಳ್ಳಲಾಗುವುದು ; (ಹೊಸದಾಗಿ ಬಸ್ ಸಂಚಾರ ಪ್ರಾರಂಭ ಮಾಡುವ ಸಮಯ ಹಾಗೂ ಮಾರ್ಗದ ವಿವರ ನೀಡುವುದು)

(ಈ) ನಾಗಮಂಗಲ–ಮೈಸೂರು ಮುಖ್ಯ ರಸ್ತೆಯಲ್ಲಿ ದಿನನಿತ್ಯ ಓಡಾಡುವ ಸಾರಿಗೆ ಬಸ್‌ಗಳನ್ನು ಹೊನ್ನಬೆಟ್ಟದ ಹೊಸೂರು, ಮಡಿಕೆ ಹೊಸೂರು–ಕಲ್ಲುದೇವನಹಳ್ಳಿ ಗೇಟ್ ಬಳಿ ನಿಲುಗಡೆ ನೀಡಲಾಗುತ್ತಿದೆಯೇ ;

(ಉ) ಇಲ್ಲದಿದ್ದಲ್ಲಿ, ಈ ಪ್ರದೇಶದಲ್ಲಿ ನೂತನವಾಗಿ ಕೇಂದ್ರ ಸರ್ಕಾರದ ಆಯುಷ್ ಸಂಶೋಧನ ಕೇಂದ್ರದಲ್ಲಿ ಕಾರ್ಯ ನಿರ್ವಹಿಸುವ ಮತ್ತು ಸುತ್ತಮುತ್ತಲ ಗ್ರಾಮಗಳ ಜನರಿಗೆ ದಿನನಿತ್ಯ ತಾಲ್ಲೂಕು ಕೇಂದ್ರ ಮತ್ತು ಮೈಸೂರಿಗೆ ಓಡಾಡಲು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಬಂದಿದ್ದಲ್ಲಿ, ಸದರಿ ಸ್ಥಳದಲ್ಲಿ ಬಸ್ ನಿಲುಗಡೆಯನ್ನು ಎಂದಿನಿಂದ ಪ್ರಾರಂಭ ಮಾಡಲಾಗುವುದು ? (ವಿವರ ನೀಡುವುದು)

## ಕೃಷಿ ಯಂತ್ರಧಾರೆ ಯೋಜನೆಗಳ ಬಂಡವಾಳ ಹೂಡಿಕೆ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೪೯ (೨೨೯೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷಿ ಯಂತ್ರಧಾರೆ ಯೋಜನೆಯಡಿ ಬಂಡವಾಳ ಹೂಡಿಕೆದಾರರ ಪಾಲು ಎಷ್ಟು ; ಸರ್ಕಾರದ ಪಾಲು ಎಷ್ಟು ;

(ಆ) ಯಾವ ಯಾವ ಯಂತ್ರಗಳಿಗೆ ಎಷ್ಟೆಷ್ಟು ಹಣ ಹೂಡಲಾಗಿದೆ ; (ಯಂತ್ರವಾರು ಮಾಹಿತಿ ನೀಡುವುದು)

(ಇ) ಈ ಕೃಷಿ ಯಂತ್ರಧಾರೆ ಯೋಜನೆಯಡಿ ಬಾಡಿಗೆ ಪಡೆಯುವ ರೈತರುಗಳಿಗೆ ಯಾವ ಯಾವ ಯಂತ್ರಗಳಿಗೆ, ಪ್ರತಿ ಗಂಟೆಗೆ, ಎಷ್ಟೆಷ್ಟು ಹಣ ನಿಗದಿ ಮಾಡಲಾಗಿದೆ ;

(ಈ) ಹೆಚ್ಚುವರಿ ಬಾಡಿಗೆ ಪಡೆಯುವ ಹಣದಿಂದ ರೈತರುಗಳಿಗೆ ಆರ್ಥಿಕ ಹೊರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಬಾಡಿಗೆ ದರ ಕಡಿಮೆ ಮಾಡುವ ಉದ್ದೇಶ ಇದೆಯೇ ; ಇದ್ದಲ್ಲಿ, ಯಾವಾಗ ಮಾಡಲಾಗುವುದು ?

## ಕಲಬುರಗಿ ಮತ್ತು ಬೀದರ್ ಜಿಲ್ಲೆಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗೆ ಅನುದಾನ ಕುರಿತು

**ಡಾ॥ ಚಂದ್ರಶೇಖರ್ ಬಿ. ಪಾಟೀಲ್ (ಪದವೀಧರರ ಕ್ಷೇತ್ರ) :-**

೧೯೦೦ (೨೨೩೫) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಮತ್ತು ಬೀದರ್ ಜಿಲ್ಲೆಗೆ ೨೦೧೮-೧೯ ನೇ ಸಾಲಿನಿಂದ ೨೦೨೦-೨೦೨೧ ನೇ ಸಾಲಿನವರೆಗೆ ಅಲ್ಪಸಂಖ್ಯಾತರ ಇಲಾಖೆಗೆ ಒದಗಿಸಲಾಗಿರುವ ಅನುದಾನ ಎಷ್ಟು ; ಹಾಗೂ ಖರ್ಚು ಮಾಡಿದ ಅನುದಾನ ಎಷ್ಟು ; ಹಾಗೂ ಉಳಿದ ಅನುದಾನದ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ; (ಸಂಪೂರ್ಣ ಮಾಹಿತಿಯನ್ನು ಒದಗಿಸುವುದು)

(ಆ) ಈ ಜಿಲ್ಲೆಗಳಿಗೆ ೨೦೧೮-೧೯ ರಿಂದ ೨೦೨೦-೨೧ನೇ ಸಾಲಿನಲ್ಲಿ ಕ್ರಿಶ್ಚಿಯನ್, ಜೈನ್, ಬೌದ್ಧ ಮತ್ತು ಸಿಖ್ ಸಮುದಾಯಗಳ

ಅಭಿವೃದ್ಧಿಗಾಗಿ ಬಂದಿರುವ ಅನುದಾನ ಎಷ್ಟು ; ಮತ್ತು ಬಳಕೆ ಆಗದಿರುವ ಅನುದಾನ ಎಷ್ಟು ; ಅದಕ್ಕೆ ಕಾರಣವೇನು ; (ವರ್ಷವಾರು ವಿವರವಾದ ಮಾಹಿತಿ ನೀಡುವುದು)

(ಇ) ಈ ಜಿಲ್ಲೆಗಳಿಗೆ ೨೦೧೮-೧೯ ರಿಂದ ೨೦೨೦-೨೧ನೇ ಸಾಲಿನಲ್ಲಿ ಪ್ರಧಾನ ಮಂತ್ರಿ ಜನ ವಿಕಾಸ ಕಾರ್ಯಕ್ರಮ (ಎಂ.ಎಸ್.ಡಿ.ಪಿ)ಕ್ಕೆ ಬಂದಿರುವ ಅನುದಾನ ಎಷ್ಟು ; ಆ ಪೈಕಿ ಬಳಕೆಯಾದ ಅನುದಾನ ಎಷ್ಟು ; ಮತ್ತು ಬಳಕೆ ಆಗದ ಅನುದಾನ ಎಷ್ಟು ? (ವಿವರವಾದ ಮಾಹಿತಿ ನೀಡುವುದು)

## ಕಲಬುರಗಿ ಮತ್ತು ಬೀದರ್ ಜಿಲ್ಲೆಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಬಗ್ಗೆ

**ಡಾ॥ ಚಂದ್ರಶೇಖರ್ ಬಿ. ಪಾಟೀಲ್ (ಪದವೀಧರರ ಕ್ಷೇತ್ರ) :-**

೧೯೦೧ (೨೨೩೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಮತ್ತು ಬೀದರ್ ಜಿಲ್ಲೆಗಳಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವ್ಯಾಪ್ತಿಯ ರಸ್ತೆಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಆ) ೨೦೧೮-೧೯ ನೇ ಸಾಲಿನಲ್ಲಿ ರಸ್ತೆಗಳ ಅಭಿವೃದ್ಧಿಗೆ ಬಿಡುಗಡೆಯಾದ ಅನುದಾನವೆಷ್ಟು ;

(ಇ) ಈ ಅನುದಾನದಿಂದ ಯಾವ ಯಾವ ರಸ್ತೆಗಳಿಗೆ ಎಷ್ಟೆಷ್ಟು ಹಣ ಉಪಯೋಗಿಸಿ ಅಭಿವೃದ್ಧಿಪಡಿಸಲಾಗಿದೆ ? (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

## ತೋಟಗಾರಿಕೆ ಅಭಿವೃದ್ಧಿಗೆ ಕಾರ್ಯಕ್ರಮಗಳು

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೯೦೨ (೨೩೦೪) ಮಾನ್ಯ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ತೋಟಗಾರಿಕಾ ಅಭಿವೃದ್ಧಿಗಾಗಿ ಇಲಾಖೆಯಿಂದ ಯಾವ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ;

(ಆ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಎಷ್ಟು ಜನ ರೈತರು ಈ ಕಾರ್ಯಕ್ರಮಗಳಿಂದ ಯಾವ ರೀತಿಯ ಪ್ರಯೋಜನ ಪಡೆದಿದ್ದಾರೆ ;

(ಇ) ಹಣ್ಣು ಮತ್ತು ತರಕಾರಿಗಳನ್ನು ಬೆಳೆದ ರೈತರಿಗೆ ಅನುಕೂಲ ಮಾಡಿಕೊಡಲು ಮತ್ತು ಸೂಕ್ತ ಬೆಲೆ ಕೊಡಿಸಲು ಇಲಾಖೆ ಯಾವ ರೀತಿಯ ಕ್ರಮ ಕೈಗೊಂಡಿದೆ ? (ವಿವರ ನೀಡುವುದು)

## ಮಕ್ಕಳ ಅಭಿವೃದ್ಧಿಗಾಗಿ ಮಾಡುತ್ತಿರುವ ಕಾರ್ಯಕ್ರಮಗಳ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೯೦೩ (೨೩೦೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಕ್ಕಳ ಅಭಿವೃದ್ಧಿಗಾಗಿ ಯಾವ ರೀತಿಯ ಕಾರ್ಯಕ್ರಮಗಳನ್ನು ಇಲಾಖೆಯಲ್ಲಿ ನಡೆಸಲಾಗುತ್ತಿದೆ ; ಇದರಿಂದ ಎಷ್ಟು ಮಕ್ಕಳಿಗೆ ಪ್ರಯೋಜನವಾಗಿದೆ ; (ಕಳೆದ ೨ ವರ್ಷಗಳ ಮಾಹಿತಿ ನೀಡುವುದು)

(ಆ) ನಗರ ಮತ್ತು ಗ್ರಾಮೀಣ ಪ್ರದೇಶದ ಮಕ್ಕಳಿಗೆ ಬೇರೆ ಬೇರೆ ರೀತಿಯ ಕಾರ್ಯಕ್ರಮಗಳಿವೆಯೇ ; (ವಿವರಗಳನ್ನು ನೀಡುವುದು)

(ಇ) ಹೊಸದಾಗಿ ಮಕ್ಕಳ ಕಲ್ಯಾಣಕ್ಕಾಗಿ ಏನಾದರೂ ಯೋಜನೆಗಳನ್ನು ಸರ್ಕಾರ ರೂಪಿಸಲಾಗಿದೆಯೇ ? (ವಿವರ ನೀಡುವುದು)

**ಕೆ.ಎಸ್.ಆರ್.ಟಿ.ಸಿ. ಸಂಸ್ಥೆಯು ಅನುಭವಿಸುತ್ತಿರುವ ನಷ್ಟದ ಕುರಿತು**

**ಶ್ರೀ ಗೋವಿಂದರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೯೦೪ (೨೨೩೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋವಿಡ್–೧೯ರ ಹಿಂದಿನಿಂದಲೂ ಕೆ.ಎಸ್.ಆರ್.ಟಿ.ಸಿ. ಸಂಸ್ಥೆಯು ನಷ್ಟ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ; ಹಾಗಿದ್ದಲ್ಲಿ ಇದಕ್ಕೆ ಕಾರಣಗಳೇನು ;

(ಆ) ಸದರಿ ಸಂಸ್ಥೆಯು ನಷ್ಟ ಹೊಂದಲು ಖಾಸಗಿ ವಾಹನಗಳ ಅನಧಿಕೃತ ಓಡಾಟವೆ ಕಾರಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ ಅನಧಿಕೃತವಾಗಿ ಓಡಾಡುವ ಖಾಸಗಿ ವಾಹನಗಳ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಹಾಗೂ ಅವರುಗಳಿಂದ ವಸೂಲಾದ ದಂಡದ ಮೊತ್ತವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ಜಿಲ್ಲಾ ಮಟ್ಟದಲ್ಲಿ ಖಾಸಗಿ ವಾಹನಗಳಿಗೆ ಪರವಾನಗಿ ನೀಡುವಾಗ ಸರ್ಕಾರ ಅನುಸರಿಸುತ್ತಿರುವ ಮಾನದಂಡಗಳೇನು ;

(ಊ) ಈ ಖಾಸಗಿ ವಾಹನಗಳು ಒಳ ರಸ್ತೆಗಳಲ್ಲಿ ಸಂಚರಿಸಲು ಪರವಾನಗಿ ಪಡೆದು ಮುಖ್ಯ ರಸ್ತೆಗಳಲ್ಲಿ ಸಂಚರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಋ) ಹಾಗಿದ್ದಲ್ಲಿ, ಇಂತಹ ಎಷ್ಟು ಖಾಸಗಿ ವಾಹನಗಳ ಮೇಲೆ ಕ್ರಮಕೈಗೊಳ್ಳಲಾಗಿದೆ ; (ಜಿಲ್ಲಾವಾರು ವಿವರಗಳನ್ನು ನೀಡುವುದು)

(ಎ) ಕೆ.ಎಸ್.ಆರ್.ಟಿ.ಸಿ.ಯಲ್ಲಿ ಕಾರ್ಯನಿರ್ವಹಿಸುತ್ತಿರುವ ಒಟ್ಟು ನೌಕರರ ಸಂಖ್ಯೆ ಎಷ್ಟು ; ಹಾಗೂ ಅಧಿಕಾರಿಗಳ ಸಂಖ್ಯೆ ಎಷ್ಟು; (ವೃಂದಗಳವಾರು ವಿವರ ನೀಡುವುದು)

(ಏ) ಕೋವಿಡ್–೧೯ರ ನಂತರ ಇದುವರೆವಿಗೂ ಸಾರಿಗೆ ಸಂಸ್ಥೆಗಳ ಸಂಬಳ ಹಾಗೂ ಇತರೆ ವೆಚ್ಚಗಳಿಗೆ ಸರ್ಕಾರ ನೀಡಿರುವ ಮೊತ್ತವೆಷ್ಟು ;

(ಐ) ಸಾರಿಗೆ ಸಂಖ್ಯೆ ಮತ್ತು ವಾಹನಗಳ ಪುನಃಶ್ಚೇತನಕ್ಕೆ ಸರ್ಕಾರ ಯಾವುದಾದರು ಕಾರ್ಯಕ್ರಮಗಳನ್ನು ರೂಪಿಸಿದೆಯೇ ; ಹಾಗಿದ್ದಲ್ಲಿ, ಕಾರ್ಯಕ್ರಮಗಳ ರೂಪುರೇಷೆಗಳೇನು ? (ಪ್ರತಿಯನ್ನು ಒದಗಿಸುವುದು)

## ರಾಜ್ಯ ಹಣಕಾಸು ಆಯೋಗವು RDPR ಇಲಾಖೆಗೆ ಬಿಡುಗಡೆ ಮಾಡುವ ಅನುದಾನ ಕುರಿತು

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೦೫ (೨೨೬೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ರಾಜ್ಯ ಹಣಕಾಸು ಆಯೋಗವು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಎಷ್ಟು ಅನುದಾನ ಬಿಡುಗಡೆ ಮಾಡಲು ಶಿಫಾರಸ್ಸು ಮಾಡಿದೆ ; ಈ ಶಿಫಾರಸ್ಸುಗಳ ಅನ್ವಯ ರಾಜ್ಯದ ಯಾವ ಯಾವ ಜಿಲ್ಲೆಗಳಿಗೆ ಎಷ್ಟೆಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ರಾಜ್ಯ ಹಣಕಾಸು ಆಯೋಗದ ಶಿಫಾರಸ್ಸಿನಂತೆ ಹಾಸನ ಜಿಲ್ಲಾ ಪಂಚಾಯಿತಿಗೆ ಬಿಡುಗಡೆಯಾಗಿರುವ ಅನುದಾನವೆಷ್ಟು ; ಇದರಲ್ಲಿ ಪ್ರತಿ ತಾಲ್ಲೂಕು ಪಂಚಾಯಿತಿ ಮತ್ತು ಗ್ರಾಮ ಪಂಚಾಯಿತಿಗಳಿಗೆ ಬಿಡುಗಡೆಯಾಗಿರುವ ಅನುದಾನವೆಷ್ಟು ; (ಸಂಪೂರ್ಣ ವಿವರ ನೀಡುವುದು)

(ಇ) ಈ ಅನುದಾನದಲ್ಲಿ ಜಿಲ್ಲೆಯಲ್ಲಿ ಕೈಗೊಂಡಿರುವ ಕಾಮಗಾರಿಗಳು ಯಾವುವು ; ಈ ಕಾಮಗಾರಿಗಳು ಯಾವ ಹಂತದಲ್ಲಿದೆ ; ಈ ಕಾಮಗಾರಿಗಳಿಗಾಗಿ ಮಂಜೂರಾದ ಹಾಗೂ ಬಿಡುಗಡೆಯಾಗಿರುವ ಅನುದಾನವೆಷ್ಟು ; ಇದರಲ್ಲಿ ಗುತ್ತಿಗೆದಾರರಿಗೆ ಬಿಡುಗಡೆ ಮಾಡಿರುವ ಅನುದಾನವೆಷ್ಟು ; (ಕಾಮಗಾರಿವಾರು ವಿವರ ನೀಡುವುದು)

(ಈ) ಹಾಸನ ಜಿಲ್ಲಾ ಪಂಚಾಯತ್ ವತಿಯಿಂದ ಕೈಗೊಂಡಿರುವ ಹಲವಾರು ಕಾಮಗಾರಿಗಳನ್ನು ಪೂರ್ಣಗೊಳಿಸದೇ ಇದ್ದರೂ ಕೂಡ ಕಾಮಗಾರಿಗಳನ್ನು ಮಾಡಲಾಗಿದೆ ಎಂದು ದಾಖಲೆಗಳನ್ನು ಸೃಷ್ಟಿಸಿ ಗುತ್ತಿಗೆದಾರರಿಗೆ ಬಿಲ್ ಪಾವತಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಸಂಬಂಧ ಕೈಗೊಂಡಿರುವ ಕ್ರಮಗಳೇನು ? (ಪ್ರಕರಣವಾರು ವಿವರ ನೀಡುವುದು)

## ಮಧುವನ ಮತ್ತು ಜೇನು ಸಾಕಾಣಿಕೆ ಅಭಿವೃದ್ಧಿ ಯೋಜನೆ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೯೦೬ (೨೨೬೨) ಮಾನ್ಯ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೩ ವರ್ಷಗಳಲ್ಲಿ ಹಾಸನ ಜಿಲ್ಲೆಯಲ್ಲಿ ಮಧುವನ ಮತ್ತು ಜೇನು ಸಾಕಾಣಿಕೆ ಅಭಿವೃದ್ಧಿ ಯೋಜನೆಯಡಿ ಎಷ್ಟು ಜನ

ಫಲಾನುಭವಿಗಳಿಗೆ ತರಬೇತಿ ನೀಡಿ ಜೇನು ಪೆಟ್ಟಿಗೆ ಹಾಗೂ ಜೇನು ಕುಟುಂಬಗಳಿಗೆ ಸಹಾಯಧನ ನೀಡಲಾಗಿದೆ ; (ಫಲಾನುಭವಿಗಳವಾರು ಮಾಹಿತಿ ನೀಡುವುದು)

(ಆ) ಜಿಲ್ಲೆಯಲ್ಲಿ ಎಷ್ಟು ಜನ ಫಲಾನುಭವಿಗಳಿಗೆ ಮಧುವನಗಳ ಸ್ಥಾಪನೆಗೆ ಸಹಾಯಧನ ನೀಡಲಾಗಿದೆ ; (ಫಲಾನುಭವಿವಾರು ಮಾಹಿತಿ ನೀಡುವುದು)

(ಇ) ಕಾಡಂಚಿನ ಗ್ರಾಮಗಳ ನಿರುದ್ಯೋಗಿ ಯುವಕರಿಗೆ ಜೇನು ಸಾಕಾಣಿಕೆ ಮಾಡಲು ವಿಶೇಷ ತರಬೇತಿ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಉದ್ಯೋಗ ಸೃಷ್ಠಿ ಮಾಡಲು ಸರ್ಕಾರದಿಂದ ಹೊಸ ಯೋಜನೆಗಳನ್ನು ರೂಪಿಸಲಾಗುವುದೇ ? (ವಿವರ ನೀಡುವುದು)

## ಅಲ್ಪಸಂಖ್ಯಾತರ ಇಲಾಖೆಯ ಕಾರ್ಯಕ್ರಮಗಳ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೦೭ (೨೨೬೧) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಹಾಸನ ಜಿಲ್ಲೆಗೆ ವಿವಿಧ ಯೋಜನೆಗಳಡಿ ಮಂಜೂರಾದ ಅನುದಾನವೆಷ್ಟು ; ಹಾಗೂ ಬಿಡುಗಡೆಯಾದ ಅನುದಾನವೆಷ್ಟು ; ಬಿಡುಗಡೆಯಾಗದೇ ಬಾಕಿ ಉಳಿದಿರುವ ಅನುದಾನವೆಷ್ಟು ; ಬಾಕಿ ಉಳಿಯಲು ಕಾರಣಗಳೇನು ; ಇದನ್ನು ಯಾವ ಕಾಲಮಿತಿಯಲ್ಲಿ ಬಿಡುಗಡೆ ಮಾಡಲಾಗುವುದು ; (ವಿವರ ನೀಡುವುದು)

(ಆ) ಈ ಅನುದಾನದಲ್ಲಿ ಕೈಗೊಂಡ ಕಾಮಗಾರಿಗಳು ಯಾವುವು ; ಈ ಕಾಮಗಾರಿಗಳ ಮೊತ್ತವೆಷ್ಟು ; ಕಾಮಗಾರಿಗಳನ್ನು ನಿರ್ವಹಿಸಿದ ಗುತ್ತಿಗೆದಾರರು ಯಾರು ; (ಕಾಮಗಾರಿ ಹೆಸರು, ತಾಲ್ಲೂಕಿನ ಮತ್ತು ಗ್ರಾಮದ ವಿವರ ನೀಡುವುದು)

(ಇ) ಹಾಸನ ಜಿಲ್ಲೆಯಲ್ಲಿ ಅಲ್ಪಸಂಖ್ಯಾತರು ಹೆಚ್ಚಿನ ಸಂಖ್ಯೆಯಲ್ಲಿದ್ದು, ಮೂಲ ಸೌಲಭ್ಯಗಳಿಲ್ಲದೆ ಅವರು ಹಿಂದುಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಅಲ್ಪಸಂಖಾತರಿಗೆ ಮೂಲ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದಲ್ಲಿ ಅಭಿಯಂತರರ ಕೊರತೆ ಇರುವ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೯೦೮ (೨೨೫೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಾಸನ ಜಿಲ್ಲೆಯ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಕ್ಕೆ ಮಂಜೂರಾಗಿರುವ ತಾಂತ್ರಿಕ ಅಧಿಕಾರಿಗಳ (ವರ್ಕ್ಸ್ ಇನ್‌ಸ್ಪೆಕ್ಟರ್, ಕಿರಿಯ ಅಭಿಯಂತರರು, ಸಹಾಯಕ ಅಭಿಯಂತರರು, ಸಹಾಯಕ ಕಾರ್ಯಪಾಲಕ ಅಭಿಯಂತರರು, ಕಾರ್ಯಪಾಲಕ ಅಭಿಯಂತರರು ಇತ್ಯಾದಿ) ಹುದ್ದೆಗಳೆಷ್ಟು ; ಭರ್ತಿಯಾಗಿರುವ ಹಾಗೂ ಖಾಲಿ ಇರುವ ಹುದ್ದೆಗಳೆಷ್ಟು ; ಖಾಲಿ ಇರುವ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು ; (ವಿವರ ನೀಡುವುದು)

(ಆ) ಹಾಸನ ಜಿಲ್ಲೆಯ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದಲ್ಲಿ ತಾಂತ್ರಿಕ ಅಧಿಕಾರಿಗಳ ಕೊರತೆಯಿಂದ ಗುತ್ತಿಗೆದಾರರಿಗೆ ಬಿಲ್‌ಗಳನ್ನು ಪಾಸ್ ಮಾಡಲು ಸಾಕಷ್ಟು ವಿಳಂಬವಾಗುತ್ತಿರುವುದು ಮತ್ತು ಇಲಾಖೆಯಿಂದ ಕೈಗೊಳ್ಳುತ್ತಿರುವ ಕಾಮಗಾರಿಗಳು ಕುಂಟುತ್ತಾ ಸಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಈ ಸಂಬಂಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ಅಲ್ಲದೇ, ಜಿ.ಪಿ.ಎಸ್. ತಂತ್ರಾಂಶದ ಮೂಲಕ ಕಾಮಗಾರಿಗಳ ಸ್ಥಳ ಪರಿಶೀಲನೆ ಮಾಡಿ ಕಾಮಗಾರಿಗಳ ಪ್ರಗತಿ ವಿವರವನ್ನು ಗಾಂಧಿ ಸಾಕ್ಷಿ ಕಾಯಕ (GSK) ತಂತ್ರಾಂಶಕ್ಕೆ ಅಳವಡಿಸಬೇಕಾಗಿದ್ದು ಈ ಎರಡು ತಂತ್ರಾಂಶಗಳು ಸಹ ಸರಿಯಾಗಿ ಕಾರ್ಯನಿರ್ವಹಿಸಿದ ಕಾರಣ ತಾಂತ್ರಿಕ ಅಡಚಣೆಯಿಂದ ಎಲ್ಲಾ ಕಾರ್ಯಗಳು ನಿಧಾನಗತಿಯಲ್ಲಿ ಸಾಗುತ್ತಿದ್ದು, ಇದರಿಂದ ಇಲಾಖಾ ಅಧಿಕಾರಿಗಳು ಮತ್ತು ಗುತ್ತಿಗೆದಾರರಿಗೆ ಸಾಕಷ್ಟು ತೊಂದರೆಗಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಸಂಬಂಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಮುಖ್ಯಮಂತ್ರಿ ಸುವರ್ಣ ಗ್ರಾಮ ಮತ್ತು ಗ್ರಾಮ ವಿಕಾಸ ಯೋಜನೆಗಳ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೧೯ (೨೨೫೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೯ ವರ್ಷಗಳಲ್ಲಿ ಮುಖ್ಯಮಂತ್ರಿ ಸುವರ್ಣ ಗ್ರಾಮ ಮತ್ತು ಗ್ರಾಮ ವಿಕಾಸ ಯೋಜನೆಗಳಡಿ ಚನ್ನರಾಯಪಟ್ಟಣ ತಾಲ್ಲೂಕಿನಲ್ಲಿ ಕೈಗೊಂಡಿರುವ ಕಾಮಗಾರಿಗಳು ಯಾವುವು ; ಈ ಕಾಮಗಾರಿಗಳು ಯಾವ ಹಂತದಲ್ಲಿವೆ ; ಈ ಕಾಮಗಾರಿಗಳಿಗಾಗಿ ಮಂಜೂರಾದ ಹಾಗೂ ಬಿಡುಗಡೆಯಾಗಿರುವ ಅನುದಾನವೆಷ್ಟು; ಇದರಲ್ಲಿ ಗುತ್ತಿಗೆದಾರರಿಗೆ ಬಿಡುಗಡೆ ಮಾಡಿರುವ ಅನುದಾನವೆಷ್ಟು ; (ಕಾಮಗಾರಿವಾರು ಮತ್ತು ಗ್ರಾಮವಾರು ವಿವರ ನೀಡುವುದು)

(ಆ) ಈ ಯೋಜನೆಗಳಡಿ ಕೈಗೊಂಡಿರುವ ಎನ್‌ಸಿಪಿ/ಟಿಎಸ್‌ಪಿ ಕಾಮಗಾರಿಗಳು ಯಾವುವು ; ಈ ಕಾಮಗಾರಿಗಳು ಯಾವ ಹಂತದಲ್ಲಿವೆ ; ಈ ಕಾಮಗರಿಗಳಿಗಾಗಿ ಮಂಜೂರಾದ ಹಾಗೂ ಬಿಡುಗಡೆಯಾಗಿರುವ ಅನುದಾನವೆಷ್ಟು ; ಇದರಲ್ಲಿ ಗುತ್ತಿಗೆದಾರರಿಗೆ ಬಿಡುಗಡೆ ಮಾಡಿರುವ ಅನುದಾನವೆಷ್ಟು ; (ಕಾಮಗಾರಿವಾರು ವಿವರ ನೀಡುವುದು)

(ಇ) ಈ ಯೋಜನೆಗಳಡಿ ಕೈಗೊಂಡಿರುವ ಹಲವಾರು ಕಾಮಗಾರಿಗಳನ್ನು ಪೂರ್ಣಗೊಳಿಸದಿದ್ದರೂ ಕಾಮಗಾರಿಗಳನ್ನು ಮಾಡಲಾಗಿದೆ ಎಂದು ದಾಖಲೆಗಳನ್ನು ಸೃಷ್ಟಿಸಿ ಗುತ್ತಿಗೆದಾರರಿಗೆ ಬಿಲ್ ಪಾವತಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಸಂಬಂಧ ಕೈಗೊಂಡಿರುವ ಕ್ರಮಗಳೇನು ? (ಪ್ರಕರಣವಾರು ವಿವರ ನೀಡುವುದು)

## ಕ್ರಿಶ್ಚಿಯನ್ ಅಭಿವೃದ್ಧಿ ಕುರಿತಂತೆ ಮಾಹಿತಿ

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೯೧೦ (೨೨೫೬) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೮-೧೯ರಲ್ಲಿ ಆರಂಭಗೊಂಡ ಕ್ರಿಶ್ಚಿಯನ್ ಅಭಿವೃದ್ಧಿ ನಿಗಮಕ್ಕೆ ಆರಂಭವಾದಾಗಿನಿಂದ ಇಲ್ಲಿಯವರೆಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; ಇದರಲ್ಲಿ ಖರ್ಚಾದ ಅನುದಾನವೆಷ್ಟು ; (ಮಾಹಿತಿ ಒದಗಿಸುವುದು)

(ಆ) ಸದರಿ ನಿಗಮ/ಮಂಡಳಿ ಘೋಷಿತ ಅನುದಾನವು ಭಾಗಶಃ ಬೇರೆ ಇಲಾಖೆಗೆ ನೀಡಲಾಗಿದೆಯೇ ; ನೀಡಿದ್ದಲ್ಲಿ, ಅನುದಾನದ ಮೊತ್ತ ಎಷ್ಟು ; (ಮಾಹಿತಿ ನೀಡುವುದು)

(ಇ) ೨೦೧೮-೧೯ ರಿಂದ ೨೦ನೇ ಸಾಲಿನಿಂದ ಇಲ್ಲಿಯವರೆಗೆ ಕ್ರಿಶ್ಚಿಯನ್ ಸಮುದಾಯದ ಅಭಿವೃದ್ಧಿಗೆ (ಮಕ್ಕಳ ಸ್ಕಾಲರ್ ಸಿಫ್, ಶಿಕ್ಷಣಕ್ಕೆ ಸಾಲ, ಸ್ವ-ಉದ್ಯೋಗ ಸಾಲ ಇತ್ಯಾದಿ) ಸೇರಿದಂತೆ ಎಷ್ಟು ಅನುದಾನ ನೀಡಲಾಗಿದೆ ; (ಮಾಹಿತಿ ಒದಗಿಸುವುದು)

(ಈ) ೨೦೧೮-೧೯ ರಿಂದ ಕ್ರಿಶ್ಚಿಯನ್ ಸಮುದಾಯದ ಅಭಿವೃದ್ಧಿಗೆ ಸಂಬಂಧಿಸಿದಂತೆ ಚರ್ಚ್‌ಗಳ ದುರಸ್ತಿ ಮತ್ತು ಸಮುದಾಯ ಭವನಗಳ ನಿರ್ಮಾಣಕ್ಕೆ ನೀಡಲಾದ ಅನುದಾನ ಎಷ್ಟು; (ಅಂಕಿ ಅಂಶಗಳ ಸಹಿತ ಸಂಪೂರ್ಣ ಮಾಹಿತಿ ನೀಡುವುದು)

## ಬೆಳ್ತಂಗಡಿ ತಾಲ್ಲೂಕಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿಗಳ ಕುರಿತು

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೯೧೧ (೨೨೫೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲ್ಲೂಕಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಒಟ್ಟು ಅಂಗನವಾಡಿಗಳ ಸಂಖ್ಯೆ ಎಷ್ಟು;

(ಆ) ಗರಿಷ್ಠ ಹಾಗೂ ಕನಿಷ್ಠ ಮಕ್ಕಳಿರುವ ಅಂಗನವಾಡಿಗಳ ಸಂಖ್ಯೆ ಎಷ್ಟು ; (ಪ್ರಸ್ತುತ ನೀಡುತ್ತಿರುವ ಪೌಷ್ಠಿಕ ಆಹಾರದ ಕುರಿತಂತೆ ಮಾಹಿತಿ ಒದಗಿಸುವುದು)

(ಇ) ಪ್ರತಿ ಮಗುವಿಗೆ ಪೌಷ್ಠಿಕ ಆಹಾರಕ್ಕೆ ಸಂಬಂಧಿಸಿದಂತೆ ನೀಡಲಾಗುತ್ತಿರುವ ಅನುದಾನ ಎಷ್ಟು ; (ಮಾಹಿತಿ ನೀಡುವುದು)

(ಈ) ಬಾಡಿಗೆ ಕಟ್ಟಡವಿರುವ ಕಡೆಗಳಲ್ಲಿ ಸ್ವಂತ ಕಟ್ಟಡ ನಿರ್ಮಿಸುವ ಯೋಜನೆ ಸರ್ಕಾರದ ಮುಂದಿದೆಯೇ ; ಈ ಬಗ್ಗೆ ಹಾಗೂ ತಾಲ್ಲೂಕುವಾರು ವಾರ್ಷಿಕವಾಗಿ ಬೇಕಾಗುವ ಅನುದಾನ ಎಷ್ಟು ?

## ಯುವಕ-ಯುವತಿಯರಿಗೆ ಲಘು ವಾಹನ ತರಬೇತಿ ನೀಡುವ ಬಗ್ಗೆ

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೯೧೨ (೨೨೯೦) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಾರಿಗೆ ಇಲಾಖೆಯಿಂದ ನಿರುದ್ಯೋಗಿ ಯುವಕ/ಯುವತಿಯರಿಗೆ (ಎಸ್.ಸಿ/ಎಸ್.ಟಿ ಹೊರತುಪಡಿಸಿ) ಉಚಿತ ಲಘು ವಾಹನ ತರಬೇತಿ ನೀಡಲಾಗಿದೆಯೇ ; (ಮಾಹಿತಿ ನೀಡುವುದು)

(ಆ) ಲಘು ವಾಹನ ತರಬೇತಿಗಾಗಿ ಅರ್ಜಿಗಳನ್ನು ಆಹ್ವಾನಿಸುವುದು ಯಾವಾಗ ;

(ಇ) ಬಿ.ಬಿ.ಎಂ.ಪಿ. ಹಾಗೂ ಇತರೆ ಮಹಾನಗರ ಪಾಲಿಕೆಗಳಿಂದಲೂ ವಾಹನ ತರಬೇತಿಯನ್ನು ನೀಡಲಾಗುತ್ತದೆಯೇ ; ಇದ್ದಲ್ಲಿ, ಅದರ ಬಗ್ಗೆ ಮಾಹಿತಿ ನೀಡುವುದು ;

(ಈ) ಉಚಿತ ಲಘುವಾಹನ ತರಬೇತಿಯನ್ನು ಪಡೆಯಲು ಬೇಕಾದ ಅರ್ಹತೆಗಳೇನು ; ಹಾಗೂ ತರಬೇರಿ ಅವಧಿಯಲ್ಲಿ ಸಿಗುವ ಸೌಲಭ್ಯಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಅನುಪಯುಕ್ತ ವಾಹನಗಳ ಕುರಿತು

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೯೧೩ (೨೨೫೭) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇತ್ತೀಚೆಗೆ ಸರ್ಕಾರ ನೀಡಿದ ಅಂಕಿ ಅಂಶಗಳ ಪ್ರಕಾರ ೨೧.೯೬ ಲಕ್ಷ ವಾಹನಗಳು ಹೊಸ ಸಾರಿಗೆ ನಿಯಮದಂತೆ ಅನುಪಯುಕ್ತವಾಗುವ (ಗುಜರಿಗೆ ಸೇರುವ) ಸಂಭವವಿದ್ದು, ಇದರಿಂದಾಗಿ ಸಾಲ ಮಾಡಿ ಕಷ್ಟದಲ್ಲಿ ವಾಹನ ಖರೀದಿಸಿ ಜೀವನ ನಿರ್ವಹಣೆ ಮಾಡುವ ವಾಹನ ಮಾಲೀಕರಿಗೆ ತೊಂದರೆಯಾಗುವುದಿಲ್ಲವೇ ;

(ಆ) ಈ ಕುರಿತಂತೆ ಗುಜರಿಗೆ ಸೇರಲ್ಪಡುವ ವಾಹನ ಮಾಲೀಕರಿಗೆ ಸರ್ಕಾರ ಪರಿಹಾರ/ಅನುಕೂಲ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಇ) ಈ ಕುರಿತಂತೆ ಸರ್ಕಾರದ ನಿಲುವೇನು ? (ಮಾಹಿತಿ ಒದಗಿಸುವುದು)

## ಶಿವಮೊಗ್ಗದಲ್ಲಿ ಏರ್‌ಪೋರ್ಟ್ ನಿರ್ಮಾಣ

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೯೧೪ (೨೨೪೩) ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ, ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿವಮೊಗ್ಗದಲ್ಲಿ ಏರ್‌ಪೋರ್ಟ್ ನಿರ್ಮಾಣ ಯಾವ ಹಂತದಲ್ಲಿದೆ; (ವಿವರ ಒದಗಿಸುವುದು)

(ಆ) ಇದಕ್ಕಾಗಿ ಇದುವರೆವಿಗೂ ಬಿಡುಗಡೆಗೊಂಡ ಮತ್ತು ಖರ್ಚಾದ ಅನುದಾನವೆಷ್ಟು; ಕಾಮಗಾರಿ ಟೆಂಡರ್ ಯಾವ ಕಂಪನಿಗೆ ನೀಡಲಾಗಿದೆ ? (ಮಾಹಿತಿ ನೀಡುವುದು)

## ನಮ್ಮ ಗ್ರಾಮ–ನಮ್ಮ ರಸ್ತೆ ಯೋಜನೆ

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೯೧೫ (೨೨೨೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೮–೧೯, ೨೦೧೯–೨೦ನೇ ಸಾಲಿನಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನಮ್ಮ ಗ್ರಾಮ, ನಮ್ಮ ರಸ್ತೆ ಯೋಜನೆಯಡಿ ಎಷ್ಟು ಅನುದಾನ ಬಿಡುಗಡೆಯಾಗಿದೆ ;

(ಆ) ಖರ್ಚಾದ ಅನುದಾನವೆಷ್ಟು ; ಬಾಕಿ ಇರುವ ಅನುದಾನವೆಷ್ಟು ? (ಸಂಪೂರ್ಣ ಮಾಹಿತಿ ಒದಗಿಸುವುದು)

## ರೈತರ ಸಂಪೂರ್ಣ ಮಾಹಿತಿ ಒಳಗೊಂಡಿರುವ "ಸ್ವಾಭಿಮಾನಿ ರೈತ" ಗುರುತಿನ ಚೀಟಿ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ್ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೧೬ (೨೨೭೦) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ರೈತರ ಸಂಪೂರ್ಣ ಮಾಹಿತಿಗಳನ್ನೊಳಗೊಂಡ "ಸ್ವಾಭಿಮಾನಿ ರೈತ" ಗುರುತಿನ ಚೀಟಿ ವಿತರಣೆಯಲ್ಲಿನ ವ್ಯತ್ಯಯದ ವರದಿಯನ್ನು ಸರ್ಕಾರ ಗಮನಿಸಿದೆಯೇ ;

(ಆ) "ಸ್ವಾಭಿಮಾನಿ ರೈತ" ಗುರುತಿನ ಚೀಟಿ ಪಡೆಯಲು ಇರುವ ಮಾನದಂಡಗಳಾವುವು ; (ಮಾಹಿತಿ ನೀಡುವುದು)

(ಇ) ಈವರೆಗೆ ರಾಜ್ಯದಲ್ಲಿ ಎಷ್ಟು ರೈತರಿಗೆ "ಸ್ವಾಭಿಮಾನಿ ರೈತ" ಗುರುತಿನ ಚೀಟಿ ವಿತರಿಸಲಾಗಿದೆ ;

(ಈ) ಸದರಿ ಯೋಜನೆಗೆ ನಿಗದಿಪಡಿಸಿರುವ ಅನುದಾನದ ಮಾಹಿತಿ ನೀಡುವುದು ;

(ಉ) ಬೆಳಗಾವಿ ಜಿಲ್ಲೆಯಲ್ಲಿ ಈವರೆಗೆ ಎಷ್ಟು ರೈತರಿಗೆ "ಸ್ವಾಭಿಮಾನಿ ರೈತ" ಗುರುತಿನ ಚೀಟಿ ನೀಡಲಾಗಿದೆ ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ರಾಜ್ಯದಲ್ಲಿ ವಿಶೇಷಚೇತನರಿಗೆ ನೀಡಲಾಗುವ ಮಾಸಾಶನದಲ್ಲಿ ತಾರತಮ್ಯವಾಗಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ್ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೧೭ (೨೨೬೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಂಗವಿಕಲತೆಯ ಪ್ರಮಾಣವನ್ನಾಧರಿಸಿ ರಾಜ್ಯದಲ್ಲಿ ವಿಶೇಷಚೇತನರಿಗೆ ನೀಡುತ್ತಿರುವ ಮಾಸಾಶನದಲ್ಲಿ ತಾರತಮ್ಯ ಎಸಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ತಾರತಮ್ಯ ಸರಿಪಡಿಸಿ ಎಲ್ಲಾ ವಿಶೇಷಚೇತನರಿಗೂ ಏಕರೂಪ ಮಾಸಾಶನ ನೀಡುವ ಯೋಜನೆ ಸರ್ಕಾರದ ಮುಂದಿದೆಯೇ ;

(ಇ) ಇತರೆ ರಾಜ್ಯಗಳಿಗೆ ಹೋಲಿಸಿದಲ್ಲಿ ರಾಜ್ಯದಲ್ಲಿ ಕಡಿಮೆ ಇರುವ ಸದರಿ ಮಾಸಾಶನವನ್ನು ಹೆಚ್ಚಿಸಲು ಸರ್ಕಾರ ಯೋಜನೆ ರೂಪಿಸಿದೆಯೇ ;

(ಈ) ರಾಜ್ಯದಲ್ಲಿ ಇರುವ ಎಲ್ಲಾ ಬಗೆಯ ವಿಕಲಚೇತನರ ಒಟ್ಟು ಸಂಖ್ಯೆ ಎಷ್ಟು; ಮತ್ತು ವಾರ್ಷಿಕ ಮಾಸಾಶನದ ಮೊತ್ತ ಎಷ್ಟು; (ವಿವರ ನೀಡುವುದು)

(ಉ) ಬೆಳಗಾವಿ ಜಿಲ್ಲೆಯಲ್ಲಿರುವ ಎಲ್ಲಾ ಬಗೆಯ ವಿಕಲಚೇತನರ ಸಂಖ್ಯಾ ವಿವರ ಹಾಗೂ ವಾರ್ಷಿಕ ಮಾಸಾಶನದ ವಿವರ ನೀಡುವುದು ?

## ರಾಜ್ಯದಲ್ಲಿ ಡಿಎಲ್ ನೀಡಿಕೆ ವಿಳಂಬವಾಗುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ್ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೧೮ (೨೨೭೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಾರಿಗೆ ಇಲಾಖೆಯಲ್ಲಿ ಅರ್ಜಿ ಸಲ್ಲಿಸಿದ ೪೦ ದಿನಗಳೊಳಗಾಗಿ ಮೋಟಾರು ವಾಹನ ಚಾಲನಾ ಪರವಾನಗಿ ನೀಡಬೇಕೆಂಬ ಕಾನೂನು ಜಾರಿಯಲ್ಲಿದ್ದರೂ ಡಿಎಲ್ ಪಡೆಯುವ ಆರು ತಿಂಗಳು ಕಾಯಬೇಕಾಗುತ್ತದೆಂದು ದೂರುಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ವಿಳಂಬ ಕುರಿತಂತೆ ಸಾರಿಗೆ ಕಛೇರಿಗಳಲ್ಲಿ ಸರ್ವರ್ ಸಮಸ್ಯೆ, ಸಿಬ್ಬಂದಿಗಳ ಕೊರತೆಯ ಕಾರಣ ನೀಡುತ್ತಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ರಾಜ್ಯದಲ್ಲಿ ಸಾರಿಗೆ ಇಲಾಖೆಯಲ್ಲಿ ಮಂಜೂರಾದ ಸಿಬ್ಬಂದಿ / ಹಾಲಿ ಇರುವ ಸಿಬ್ಬಂದಿ / ಖಾಲಿ ಇರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ?

## ವಿಶೇಷ ಚೇತನರಿಗೆ ನೀಡುತ್ತಿರುವ ಸೌಲಭ್ಯಗಳ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೧೯೧೯ (೨೨೧೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಶೇಷ ಚೇತನರೆಂದು ಪರಿಗಣಿಸುವಲ್ಲಿ ಇರುವ ಮಾನದಂಡಗಳೇನು ; (ವಿವರ ಒದಗಿಸುವುದು)

(ಆ) ವಿದ್ಯಾರ್ಥಿಗಳ ಶಿಕ್ಷಣಕ್ಕಾಗಿ ಹಾಗೂ ಉದ್ಯೋಗಕ್ಕಾಗಿ ಸರ್ಕಾರ ನೀಡುತ್ತಿರುವ ಸೌಲಭ್ಯಗಳು ಹಾಗೂ ಅನುಸರಿಸುತ್ತಿರುವ ಮಾನದಂಡಗಳೇನು ; (ವಿವರ ಒದಗಿಸುವುದು)

(ಇ) ವಿಶೇಷ ಚೇತನರ ಶಿಕ್ಷಣ, ತರಬೇತಿ, ಕ್ರೀಡೆ ಹಾಗೂ ಉದ್ಯೋಗ ಇತ್ಯಾದಿಗಳ ಸೌಲಭ್ಯಕ್ಕಾಗಿ ಪ್ರತ್ಯೇಕವಾದ ವಿಶ್ವವಿದ್ಯಾನಿಲಯವನ್ನು ಪ್ರಾರಂಭಿಸಲು ಸರ್ಕಾರ ಚಿಂತಿಸುವುದೇ ;

(ಈ) ಯಾವ ಕಾಲಮಿತಿಯಲ್ಲಿ ವಿಶ್ವವಿದ್ಯಾನಿಲಯವನ್ನು ಪ್ರಾರಂಭಿಸಲಾಗುವುದು ?

## ಉರ್ದು ಶಾಲೆಗಳ ಬಗ್ಗೆ ಮಾಹಿತಿ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೧೯೨೦ (೨೨೧೯) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಸರ್ಕಾರಿ ಪ್ರಾಥಮಿಕ, ಪ್ರೌಢಶಾಲೆ ಹಾಗೂ ಪದವಿ ಪೂರ್ವ ಉರ್ದು ಶಾಲೆಗಳ ಸಂಖ್ಯೆ ಎಷ್ಟು ; (ಪ್ರತ್ಯೇಕವಾದ ವಿವರ ನೀಡುವುದು)

(ಆ) ಸದರಿ ಶಾಲೆಗಳಲ್ಲಿ ಇರುವ ಮೂಲ ಸೌಲಭ್ಯಗಳ ಕೊರತೆಗಳೇನು;

(ಇ) ಹಾಗಿದ್ದಲ್ಲಿ, ಸದರಿ ಮೂಲ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಸದರಿ ಶಾಲೆಗಳಲ್ಲಿ ಖಾಲಿ ಇರುವ ಬೋಧಕ/ಬೋಧಕೇತರರ ಹುದ್ದೆಗಳ ಸಂಖ್ಯೆ ಎಷ್ಟು ; (ಪ್ರತ್ಯೇಕವಾಗಿ ವಿವರ ನೀಡುವುದು)

(ಉ) ಖಾಲಿ ಇರುವ ಬೋಧಕ/ಬೋಧಕೇತರರ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಂಡ ಕ್ರಮಗಳೇನು ;

(ಊ) ಯಾವ ಕಾಲಮಿತಿಯಲ್ಲಿ ಸದರಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ?

## ಬಸ್ಸುಗಳ ನಕಲಿ ನೋಂದಣಿ ಸಂಖ್ಯೆ ಬಗ್ಗೆ

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-**

೧೯೨೧ (೨೨೮೭) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ತೆರಿಗೆ ವಂಚಿಸುವ ನಿಟ್ಟಿನಲ್ಲಿ ನಕಲಿ ನೋಂದಣಿ ಸಂಖ್ಯೆ ಅಳವಡಿಸಿಕೊಂಡು ವಾಹನಗಳನ್ನು ಚಲಾಯಿಸುತ್ತಿರುವ ಅನೇಕ ಪ್ರಕರಣಗಳು ವರದಿಯಾಗುತ್ತಿದ್ದು, ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಒಂದೇ ನೋಂದಣಿ ಅಡಿಯಲ್ಲಿ ಎರಡಕ್ಕಿಂತ ಹೆಚ್ಚು ಬಸ್ಸುಗಳನ್ನು ಚಲಾಯಿಸುತ್ತಿರುವ ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆಯೇ ; ಈವರೆವಿಗೂ ಎಷ್ಟು ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ ; (ವಿವರಗಳನ್ನು ನೀಡುವುದು)

(ಇ) ಬೆಂಗಳೂರಿನಿಂದ ಮಂಗಳೂರು, ಉಡುಪಿ, ಬೆಳಗಾವಿ, ಹೈದ್ರಾಬಾದ್, ಮಣಿಪಾಲ್ ಈ ಬಸ್-ರೂಟ್‌ಗಳಲ್ಲಿ ಎಷ್ಟು ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ ; (ವಿವರಗಳನ್ನು ನೀಡುವುದು)

(ಈ) ಹಾಗಿದ್ದಲ್ಲಿ, ಇವರ ವಿರುದ್ಧ ತೆಗೆದುಕೊಂಡ ಕ್ರಮಗಳೇನು ;

(ಉ) ಇಂತಹ ಪ್ರಕರಣಗಳನ್ನು ತಡೆಯಲು ಸರ್ಕಾರ ಕೈಗೊಂಡ ಕ್ರಮವೇನು ?

## ಅಂಗನವಾಡಿ ಮಕ್ಕಳ ಹಾಗೂ ಬಾಣಂತಿಯರ ಬಗ್ಗೆ

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-**

೧೯೨೨ (೨೨೪೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಅಂಗನವಾಡಿ ಕೇಂದ್ರಗಳಲ್ಲಿ ಅಪೌಷ್ಠಿಕತೆಯಿಂದ ಕೂಡಿರುವ ಮಕ್ಕಳ ಸಂಖ್ಯೆ ಎಷ್ಟು ; ಹಾಗೂ ಈ ಮಕ್ಕಳಲ್ಲಿನ ಅಪೌಷ್ಠಿಕತೆ ನಿವಾರಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ಕರ್ನಾಟಕ ರಾಜ್ಯದಲ್ಲಿ ಬಾಣಂತಿಯರು ಹಾಗೂ ಗರ್ಭಿಣಿಯರಲ್ಲಿ ಪೌಷ್ಠಿಕತೆಯನ್ನು ಹೆಚ್ಚಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಮಾಹಿತಿ ನೀಡುವುದು)

## ಪ್ರಧಾನ ಮಂತ್ರಿ ಮಾತೃ ವಂದನ ಯೋಜನೆ ಬಗ್ಗೆ

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-**

೧೯೨೩ (೨೨೮೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೇಂದ್ರ ಸರ್ಕಾರದ "ಪ್ರಧಾನ ಮಂತ್ರಿ ಮಾತೃ ವಂದನ ಯೋಜನೆ" ಯನ್ನು (ಪಿ.ಎಂ.ಎಂ.ವಿ.ವೈ) ಕರ್ನಾಟಕ ರಾಜ್ಯದಲ್ಲಿ ಜಾರಿಗೊಳಿಸಲಾಗಿದೆಯೇ ; ಇದ್ದರೆ, ಅದರ ವಿವರಗಳನ್ನು ಮತ್ತು ರೂಪುರೇಷೆಗಳನ್ನು ನೀಡುವುದು ;

(ಆ) ಈ ಯೋಜನೆಗಳ ಮಾರ್ಗಸೂಚಿಯಂತೆ, ಈ ಯೋಜನೆ ಆರಂಭದಿಂದ ತಹಲ್‌ವರೆವಿಗೂ ಎಷ್ಟು ತಾಯಿ ಮಕ್ಕಳ ರಕ್ಷಣೆ ಕಾರ್ಡ್ (ಎಂ.ಸಿ.ಪಿ) ಗಳನ್ನು ವಿತರಿಸಲಾಗಿದೆ ;

(ಇ) ಈ ಕಾರ್ಡ್‌ಗಳನ್ನು ವಿತರಿಸಲು ಸರ್ಕಾರ ನಿಗಧಿಪಡಿಸಿರುವ ಕಾಲಾವಧಿ ಎಷ್ಟು ಮತ್ತು ಕಾರ್ಡ್‌ಗಳನ್ನು ಅಪೇಕ್ಷಿಸಿ ಬಂದಿರುವ ಅರ್ಜಿಗಳನ್ನು ಪರಿಶೀಲಿಸುವ ಮತ್ತು ವಿಲೇವಾರಿ ಮಾಡುವ ಪ್ರಕ್ರಿಯೆಗೆ ತೆಗೆದುಕೊಂಡಿರುವ ಕಾಲಾವಧಿ ಎಷ್ಟು ; ಬಾಕಿ ಉಳಿದಿರುವ ಪ್ರಕರಣಗಳೆಷ್ಟು ? (ಜಿಲ್ಲಾವಾರು ವಿವರಗಳನ್ನು ನೀಡುವುದು)

## ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆಗೆ ಪ್ರತ್ಯೇಕ ವಿ.ವಿ. ಸ್ಥಾಪಿಸುವ ಬಗ್ಗೆ

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) :-**

೧೯೨೪ (೨೨೧೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯು, ವಿಕಲಚೇತನ ಶ್ರೇಯೋಭಿವೃದ್ಧಿಗಾಗಿ ವಿಕಲಚೇತನ ಕಾಯ್ದೆ ೨೦೧೬ನ್ನು ಜಾರಿಗೊಳಿಸಿದ್ದು, ಈ ನಿಯಮಗಳ ಪ್ರಕಾರ ವಿಕಲಚೇತನರಿಗೆ ಎಲ್ಲಾ ಶಾಲಾ ಕಾಲೇಜುಗಳಲ್ಲಿ ಸಾಮಾನ್ಯ ವಿದ್ಯಾರ್ಥಿಗಳೊಂದಿಗೆ ಸಮಾನ ಅವಕಾಶ ಶಿಕ್ಷಣ ಮುಂದುವರಿಸುತ್ತಿದ್ದರೂ ಸಹ ಇತ್ತೀಚೆಗೆ ಸರ್ಕಾರವು ಶಿಕ್ಷಣ ತಜ್ಞರ ಸಲಹಾ ಸಮಿತಿ ರಚಿಸಲಾಗಿದೆಯೇ ;

(ಆ) ಶಿಕ್ಷಣ ತಜ್ಞರ ಸಲಹಾ ಸಮಿತಿಯ ಕಾರ್ಯವ್ಯಾಪ್ತಿಗಳೇನು ; ಸಮಿತಿಯು ವಿಕಲಚೇತನರ ಪ್ರತ್ಯೇಕ ವಿಶ್ವವಿದ್ಯಾಲಯ ಸ್ಥಾಪಿಸಲು

ಶಿಫಾರಸ್ಸು ಮಾಡಿದೆಯೇ ; ವಿಕಲಚೇತನರಿಗೆ ಪ್ರತ್ಯೇಕ ವಿ.ವಿ. ಸ್ಥಾಪನೆಯಿಂದ ಅವರ ಹಕ್ಕುಗಳ ಚ್ಯುತಿಗೆ ಭದ್ರತೆಯ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ವಿಕಲಚೇತನರ ವಿ.ವಿ.ಗೆ ನಿಯಮಬಾಹಿರವಾಗಿ ವಿಕಲಚೇತನರ ಸಂಘ-ಸಂಸ್ಥೆ ಪ್ರತಿನಿಧಿಗಳ ಸಲಹೆ ಪಡೆಯದೇ ತಜ್ಞರ ಸಮಿತಿಯು ಸರ್ಕಾರಕ್ಕೆ ಪ್ರತ್ಯೇಕ ವಿ.ವಿ.ಗೆ ಶಿಫಾರಸ್ಸು ಮಾಡಿದೆಯೇ ; (ವಿವರಗಳನ್ನು ಒದಗಿಸುವುದು)

(ಈ) ವಿಕಲಚೇತನರ ಪ್ರತ್ಯೇಕ ವಿ.ವಿ.ಗೆ ಶಿಫಾರಸ್ಸು ಮಾಡಿದ ತಜ್ಞರ ಸಮಿತಿಯ ಶಿಫಾರಸ್ಸುಗಳನ್ನು ಸರ್ಕಾರವು ಅಂಗೀಕರಿಸುವ ಮುನ್ನ ಸಂಘ-ಸಂಸ್ಥೆಗಳ ಪ್ರತಿನಿಧಿಗಳನ್ನು ಮತ್ತು ಕಾನೂನು ತಜ್ಞರ ಸಲಹೆಯನ್ನು ಪಡೆಯಲಾಗಿದೆಯೇ ? (ವಿವರವಾದ ಮಾಹಿತಿಯನ್ನು ಒದಗಿಸುವುದು)

## ಹಂಸಧ್ವನಿ ಕಿವುಡ ಮಕ್ಕಳ ಶಾಲೆಯಲ್ಲಿನ ಶಿಕ್ಷಕರಿಗೆ ವೃಂದ ಮತ್ತು ನೇಮಕಾತಿ ನಿಯಮ ರಚಿಸುವ ಬಗ್ಗೆ

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) :-**

೧೯೨೫ (೨೨೧೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಹಂಸಧ್ವನಿ ಕಿವುಡ ಮಕ್ಕಳ ಶಾಲೆಯನ್ನು ಸರ್ಕಾರವು ದಿನಾಂಕ : ೨೩-೦೭-೨೦೧೬ರ ಆದೇಶ ಸಂಖ್ಯೆ : ಮಮಇ ೩೮೯ ಪಿಹೆಚ್‌ಪಿ ೨೦೧೪ ರಲ್ಲಿ ವಶಕ್ಕೆ ಪಡೆದು, ವಸತಿ ಶಾಲೆಯನ್ನಾಗಿ ಮಾರ್ಪಡಿಸಿದ್ದು, ಸದರಿ ಶಾಲೆಗೆ ೨೦ ಹುದ್ದೆಗಳನ್ನು ದಿನಾಂಕ : ೨೮-೦೩-೧೯೮೮ ರಲ್ಲಿ ಮಂಜೂರು ಮಾಡಿರುವುದು ನಿಜವೇ;

(ಆ) ಆರ್ಥಿಕ ಇಲಾಖೆಯು ದಿ: ೧೭-೦೭-೨೦೧೯ ರಲ್ಲಿ ಸಿಬ್ಬಂದಿಗಳನ್ನು ಇಲಾಖೆಯ ವೃಂದ ಮತ್ತು ನಿಯಮಗಳಲ್ಲಿ ವಿಲೀನಗೊಳಿಸಲು ಸಹಮತಿ ನೀಡಿ ಮಾನ್ಯ ಸಚಿವರು ಭರವಸೆ ಸಂಖ್ಯೆ : ಮಮಇ ೩೦ ಪಿಹೆಚ್‌ಪಿ ೨೦೨೧ ರಲ್ಲಿ ೩ ತಿಂಗಳಲ್ಲಿ ಸದರಿ ಶಾಲೆಯು ಸಿಬ್ಬಂದಿಗಳನ್ನು ವಿಶೇಷ ವಿಲೀನಾತಿ ನಿಯಮಗಳನ್ನು ರೂಪಿಸಿ, ಇಲಾಖೆಯಲ್ಲಿ ವಿಲೀನಗೊಳಿಸಿರುವುದಾಗಿ ಸದನದಲ್ಲಿ ಭರವಸೆ ನೀಡಲಾಗಿದೆಯೇ;

(ಇ) ಮಾನ್ಯ ಸಚಿವರ ಭರವಸೆಯಂತೆ ಇಲಾಖೆಯು ಸದರಿ ಸಿಬ್ಬಂದಿಗಳಿಗೆ ಜ್ಯೇಷ್ಠತೆಯನ್ನು ನಿಗದಿಪಡಿಸಲಾಗಿದೆಯೇ ; (ವಿವರಗಳನ್ನು ಒದಗಿಸುವುದು)

(ಈ) ಜ್ಯೇಷ್ಠತೆಯನ್ನು ಇಲಾಖೆಯ ಅಧಿಕಾರಿಗಳ ನಿರ್ಲಕ್ಷ್ಯತೆಯಿಂದ ನಿಗದಿಗೊಳಿಸದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಜ್ಯೇಷ್ಠತೆಯನ್ನು ನಿಗದಿಪಡಿಸಲಾಗುವುದು ? (ನಿರ್ದಿಷ್ಟ ಸಮಯವನ್ನು ತಿಳಿಸುವುದು)

## ವಿಜಯಪುರ ಜಿಲ್ಲೆಯಲ್ಲಿ ವಿಮಾನ ನಿಲ್ದಾಣದ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :-**

೧೯೨೬ (೨೨೭೨) ಮಾನ್ಯ ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ವಿಜಯಪುರ ಜಿಲ್ಲೆಯಲ್ಲಿ ವಿಮಾನ ನಿಲ್ದಾಣ ಯೋಜನೆಯು ಯಾವ ಹಂತದಲ್ಲಿದೆ ;

(ಆ) ವಿಮಾನ ನಿಲ್ದಾಣ ನಿರ್ಮಿಸಲು ಬೇಕಾಗುವ ಸ್ಥಳ ಎಷ್ಟು ; ವಶಪಡಿಸಿಕೊಂಡಿರುವ ಜಮೀನುಗಳ ವಿವರ ನೀಡುವುದು ;

(ಇ) ಇದಕ್ಕೆ ತಗಲುವ ವೆಚ್ಚ ಎಷ್ಟು ; ಯಾವಾಗ ಆರಂಭಿಸಲಾಗುವುದು ? (ಸಂಪೂರ್ಣ ವಿವರ ನೀಡುವುದು)

## ವಿಜಯಪುರ ಜಿಲ್ಲೆಯಲ್ಲಿ ಸ್ವಚ್ಛ ಗ್ರಾಮ ಯೋಜನೆಯಡಿಯ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :-**

೧೯೨೭ (೨೨೭೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ವಿಜಯಪುರ ಜಿಲ್ಲೆಯಲ್ಲಿ ಸ್ವಚ್ಛ ಗ್ರಾಮ ಯೋಜನೆಯಡಿ ಎಷ್ಟು ಗ್ರಾಮಗಳನ್ನು ಆಯ್ಕೆ ಮಾಡಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಒಳಚರಂಡಿ ವ್ಯವಸ್ಥೆಯಿರುವ ಗ್ರಾಮಗಳ ಸಂಖ್ಯೆ ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಇ) ಒಳಚರಂಡಿಯಿಲ್ಲದ ಗ್ರಾಮಗಳಲ್ಲಿ ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮವೇನು ?

## ಕೃಷಿ ಸಿಂಚನಾ ಯೋಜನೆಯ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :-**

೧೯೨೮ (೨೨೭೫) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೃಷಿ ಸಿಂಚನ ಯೋಜನೆಯಡಿಯಲ್ಲಿ ರೂಪಿಸಿರುವ ಕಾರ್ಯಕ್ರಮಗಳಾವುವು ;

(ಆ) ಕಳೆದ ಮೂರು ವರ್ಷಗಳಿಂದ ವಿಜಯಪುರ ಜಿಲ್ಲೆಯಲ್ಲಿ ಸದರಿ ಯೋಜನೆಯ ಉಪಯೋಗ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು ? (ವಿವರಗಳನ್ನು ಒದಗಿಸುವುದು)

## ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೧೯೨೯ (೨೨೭೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಲ್ಲಿ ಪ್ರಸ್ತುತ ಚಾಲ್ತಿಯಲ್ಲಿರುವ ವಿವಿಧ ಯೋಜನೆಗಳಾವುವು ; (ಸಂಪೂರ್ಣ ವಿವರ ನೀಡುವುದು)

(ಆ) ಕಠಿಣ ಮಾರ್ಗಸೂಚಿ ಮತ್ತು ಫಲಾನುಭವಿಗಳ ಕೊರತೆಯಿಂದ ವಿವಿಧ ಇಲಾಖೆಗಳಲ್ಲಿ ವಿಕಲಚೇತನರ ಕಲ್ಯಾಣಕ್ಕಾಗಿ ಮೀಸಲಿಟ್ಟ ಅನುದಾನವು ಖರ್ಚಾಗದೇ ಬಾಕಿ ಉಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮವೇನು ?

## ಗ್ರಾಮ ಪಂಚಾಯಿತಿಗಳಲ್ಲಿ ಇ–ಸ್ವತ್ತು ಮಾಡುವ ಬಗ್ಗೆ

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೩೦ (೨೨೫೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮ ಪಂಚಾಯಿತಿಗಳ ಅಡಿಯಲ್ಲಿ ಬರುವಂತಹ ಗ್ರಾಮಗಳಲ್ಲಿ ದಾಖಲಾಗುವ ನಿವೇಶನಗಳು ಮತ್ತು ಮನೆಗಳ ದಾಖಲಾತಿಗಳನ್ನು ಇ–ಸ್ವತ್ತಿನಡಿಯಲ್ಲಿ ನೋಂದಾಯಿಸಲು ಸರ್ಕಾರ ಕಾಲಾವಕಾಶವನ್ನು ನಿಗಧಿಪಡಿಸಿದೆಯೇ ;

(ಆ) ಧಾರವಾಡ, ಗದಗ ಮತ್ತು ಹಾವೇರಿ ಜಿಲ್ಲೆಯಲ್ಲಿ ಬರುವಂತಹ ಗ್ರಾಮಗಳಲ್ಲಿನ ಮನೆಗಳು ಮತ್ತು ನಿವೇಶನಗಳ ದಾಖಲೆಗಳನ್ನು ಇ-ಸ್ವತ್ತಿನಡಿ ನೋಂದಾಯಿಸುವ ಪ್ರಕ್ರಿಯೆಯು ಯಾವ ಪ್ರಮಾಣದಲ್ಲಿದೆ ;

(ಇ) ಸದರಿ ಜಿಲ್ಲೆಗಳಲ್ಲಿ ಇ-ಸ್ವತ್ತಿನಡಿ ಆಸ್ತಿಗಳನ್ನು ನೋಂದಾಯಿಸಲು ವಿಳಂಬ ಮಾಡಿದ ಅಧಿಕಾರಿಗಳ ವಿರುದ್ಧ ಸರ್ಕಾರ ಯಾವ ರೀತಿಯ ಕ್ರಮ ಕೈಗೊಂಡಿದೆ ?

## ಕಳೆದ ೩ ವರ್ಷಗಳಿಂದ ಶಿವಮೊಗ್ಗ ಜಿಲ್ಲೆಯಲ್ಲಿ ಪ್ರಕೃತಿ ವಿಕೋಪದಿಂದ ಬೆಳೆ ನಾಶವಾಗಿರುವ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೯೩೧ (೨೨೫೦) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಶಿವಮೊಗ್ಗ ಜಿಲ್ಲೆಯಲ್ಲಿ ಕಳೆದ ಎರಡು ವರ್ಷದಲ್ಲಿ ಪ್ರಕೃತಿ ವಿಕೋಪದಿಂದ ಬಾರಿ ಪ್ರಮಾಣದ ಬೆಳೆಗಳು ನಾಶವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಯಾವ ಯಾವ ಬೆಳೆಗಳು ಎಷ್ಟೆಷ್ಟು ಪ್ರಮಾಣದಲ್ಲಿ ನಷ್ಟವಾಗಿರುತ್ತವೆ ; (ತಾಲ್ಲೂಕುವಾರು ಹೆಕ್ಟೆರ್‌ನಲ್ಲಿ ಮಾಹಿತಿ ನೀಡುವುದು)

(ಇ) ಜಿಲ್ಲೆಯಲ್ಲಿ ಇದುವರೆಗೆ ರೈತರಿಗೆ ಎಷ್ಟು ಪ್ರವಾಣದಲ್ಲಿ ಪರಿಹಾರವನ್ನು ವಿತರಿಸಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಪರಿಹಾರ ವಿತರಿಸಿದ್ದಲ್ಲಿ, ಅನುಸರಿಸಿದ ಮಾನದಂಡಗಳೇನು ?

## ಉಡುಪಿ ಜಿಲ್ಲೆಯಲ್ಲಿ ನಿರ್ಮಿಸಲಾಗಿರುವ ಶುದ್ಧ ಕುಡಿಯುವ ನೀರಿನ ಘಟಕಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೩೨ (೨೨೧೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಜಿಲ್ಲೆಯಲ್ಲಿ ನಿರ್ಮಿಸಲಾಗಿರುವ ಶುದ್ಧ ಕುಡಿಯುವ ನೀರಿನ ಘಟಕಗಳ ಸಂಖ್ಯೆ ಎಷ್ಟು; ಅವು ಯಾವುವು ; ಅವುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಹಾಗೂ ಕಾರ್ಯ ನಿರ್ವಹಿಸದಿರುವ ಘಟಕಗಳ ಸಂಖ್ಯೆ ಎಷ್ಟು ; ಅವು ಯಾವುವು : (ಗ್ರಾಮವಾರು, ಘಟಕವಾರು ಮಾಹಿತಿ ನೀಡುವುದು)

(ಆ) ಈ ಘಟಕಗಳ ನಿರ್ವಹಣೆಯನ್ನು ಯಾರು ಮಾಡುತ್ತಿದ್ದಾರೆ; ಅವುಗಳ ಖರ್ಚು ವೆಚ್ಚವನ್ನು ಯಾವ ಲೆಕ್ಕ ಶೀರ್ಷಿಕೆ ಮೂಲಕ ನಿರ್ವಹಿಸಲಾಗುತ್ತಿದೆ ;

(ಇ) ಕಳೆದ ಒಂದು ವರ್ಷದಲ್ಲಿ ಘಟಕಗಳನ್ನು ವ್ಯವಸ್ಥಿತವಾಗಿ ಕಾರ್ಯ ನಿರ್ವಹಿಸಿರುವಂತೆ ಮಾಡುವ ನಿಟ್ಟಿನಲ್ಲಿ ಜಿಲ್ಲಾ ಪಂಚಾಯಿತಿಯ ಮುಖ್ಯಸ್ಥರು ಸೇರಿದಂತೆ ಯಾವ ಯಾವ ಹಂತದ ಅಧಿಕಾರಿಗಳು ಎಷ್ಟು ಭಾರಿ ಬೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ ; ಹಾಗೂ ಸಭೆಗಳನ್ನು ನಡೆಸಲಾಗಿರುತ್ತದೆ ? (ಘಟಕವಾರು ದಿನಾಂಕ–ದೊಂದಿಗೆ ಮಾಹಿತಿ ನೀಡುವುದು)

## ರಾಜ್ಯದ ಕೆ.ಎಸ್.ಆರ್.ಟಿ.ಸಿ., ಬಸ್ ನಿಲ್ದಾಣಗಳ ನಿರ್ಮಾಣ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೩೩ (೨೨೧೫) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಯಾವ ಯಾವ ಜಿಲ್ಲಾ ಹಾಗೂ ತಾಲ್ಲೂಕು ಕೇಂದ್ರಗಳಲ್ಲಿ ಕೆ.ಎಸ್.ಆರ್.ಟಿ.ಸಿ., ಬಸ್ ನಿಲ್ದಾಣಗಳನ್ನು ನಿರ್ಮಿಸಲಾಗಿದೆ ; ಯಾವ ಜಿಲ್ಲೆಯಲ್ಲಿ ನಿರ್ಮಿಸಲು ಬಾಕಿ ಇದೆ ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಕೆ.ಎಸ್.ಆರ್.ಟಿ.ಸಿ., ಬಸ್ ನಿಲ್ದಾಣಗಳನ್ನು ನಿರ್ಮಿಸಲು ಬಾಕಿಯಿರುವ ಜಿಲ್ಲೆ ಮತ್ತು ತಾಲ್ಲೂಕು ಕೇಂದ್ರಗಳಲ್ಲಿ ಸ್ಥಳವನ್ನು ಕಾಯ್ದಿರಿಸಲಾಗಿದೆಯೇ; ಕಾಯ್ದಿರಿಸದೇ ಇದ್ದಲ್ಲಿ ಯಾವಾಗ ಕಾಯ್ದಿರಿಸಲಾಗುವುದು ; ಬಸ್ ನಿಲ್ದಾಣ ನಿರ್ಮಾಣದ ಸಂಪೂರ್ಣ ಪ್ರಕ್ರಿಯೆಯನ್ನು ಯಾವ ಕಾಲಮಿತಿಯಲ್ಲಿ ಮುಗಿಸಲಾಗುವುದು ;

(ಇ) ರಾಜ್ಯದಲ್ಲಿ ಬೆಂಗಳೂರನ್ನು ಹೊರತುಪಡಿಸಿ ಅತೀ ಹೆಚ್ಚು ಬಸ್ಸು ಹಾದುಹೋಗುವ ಕೆ.ಎಸ್.ಆರ್.ಟಿ.ಸಿ., ಬಸ್ ನಿಲ್ದಾಣಗಳಾವುವು ; (೧ ರಿಂದ ೧೦ ಕ್ರಮಾಂಕದಲ್ಲಿ ಹೆಸರಿಸುವುದು) ಅವುಗಳಲ್ಲಿ ಮೂಲ ಸೌಕರ್ಯಗಳನ್ನು ಅಭಿವೃದ್ಧಿಪಡಿಸಲಾಗಿದೆಯೇ ?

## ಯಾಂತ್ರೀಕೃತ ಕೃಷಿಗೆ ಉತ್ತೇಜನ ನೀಡುವ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೩೪ (೨೨೧೩) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಯಾಂತ್ರೀಕೃತ ಕೃಷಿಗಾಗಿ ಇಲಾಖೆಯಲ್ಲಿ ಜಾರಿಯಲ್ಲಿರುವ ವಿವಿಧ ಯೋಜನೆ / ಕಾರ್ಯಕ್ರಮಗಳಾವುವು ; (ಯೋಜನೆಯ ಮಾರ್ಗಸೂಚಿಯೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಉಡುಪಿ ಜಿಲ್ಲೆಯಲ್ಲಿ ಯಾಂತ್ರೀಕೃತ ಕೃಷಿ ಯೋಜನೆಗಳಲ್ಲಿ ನಿಗದಿಪಡಿಸಿದ ಫಲಾನುಭವಿಗಳ ಗುರಿ, ಆರ್ಥಿಕ ಭೌತಿಕ ಸಾಧನೆ ಬಾಕಿಯೆಷ್ಟು ; (ತಾಲ್ಲೂಕುವಾರು, ಗ್ರಾಮವಾರು, ಯೋಜನೆವಾರು ಮಾಹಿತಿ ನೀಡುವುದು)

(ಇ) ಕೃಷಿ ಕೂಲಿ ಕಾರ್ಮಿಕರ ಕೊರತೆಯ ಹಿನ್ನಲೆಯಲ್ಲಿ, ಯಾಂತ್ರೀಕೃತ ಕೃಷಿಗೆ ಹೆಚ್ಚು ಉತ್ತೇಜನ ನೀಡುವ ನಿಟ್ಟಿನಲ್ಲಿ ಸರ್ಕಾರ ಕೈಗೊಳ್ಳುವ ಮುಂದಿನ ಯೋಜನೆಗಳಾವುವು ?

**ಕೆ.ಎಸ್.ಆರ್.ಟಿ.ಸಿ. ಬಸ್ ನಿಲ್ದಾಣಗಳಲ್ಲಿನ ಶೌಚಾಲಯಗಳ ಕುರಿತು**

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೩೫ (೨೨೧೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

(ಅ) ಕೆ.ಎಸ್.ಆರ್.ಟಿ.ಸಿ., ಬಸ್ ನಿಲ್ದಾಣದ ಶೌಚಾಲಯಗಳಲ್ಲಿ ಹಣಪಾವತಿ ವಿವರವನ್ನು ಕಡ್ಡಾಯವಾಗಿ ನಾಮಫಲಕ ಅಳವಡಿಸುವ ಮುಖಾಂತರ ಪ್ರಯಾಣಿಕರಿಗೆ ತಿಳಿಸಲಾಗುವುದೇ ; ಇಲ್ಲವಾದಲ್ಲಿ, ಬೇಕಾಬಿಟ್ಟಿಯಾಗಿ ಹಣವಸೂಲಿ ಮಾಡುವ ದಂಧೆಗೆ ಸರ್ಕಾರವೇ ಅವಕಾಶ ಮಾಡಿಕೊಟ್ಟಂತಾಗುವುದಿಲ್ಲವೇ ;

(ಆ) ಕೆಲವು ಕಡೆಗಳಲ್ಲಿ ಉದ್ದೇಶಪೂರ್ವಕವಾಗಿ ಹಣಪಾವತಿ ವಿವರಗಳನ್ನು ಅಳಿಸಿ ಹಾಕುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ , ಕೈಗೊಂಡಿರುವ ಕ್ರಮಗಳಾವುವು ;

(ಇ) ಶೌಚಾಲಯಗಳಲ್ಲಿ ಚಿಲ್ಲರೆ ಕೊರತೆಯಿಂದ ಅನಾವಶ್ಯಕವಾಗಿ ಪ್ರಯಾಣಿಕರು ಕಿರುಕುಳ ಅನುಭವಿಸುತ್ತಿರುವ ಹಿನ್ನೆಲೆಯಲ್ಲಿ Prepaid card ವ್ಯವಸ್ಥೆಯನ್ನು ಜಾರಿಗೆ ತರಲು ಇಲಾಖೆ ಕ್ರಮ ತೆಗೆದುಕೊಳ್ಳುವುದೇ ; ಇಲ್ಲವಾದಲ್ಲಿ ಕಾರಣಗಳೇನು ?

## ಯಾಂತ್ರೀಕೃತ ತೋಟಗಾರಿಕೆಗೆ ಉತ್ತೇಜನ ನೀಡುವ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೩೬ (೨೨೧೨) ಮಾನ್ಯ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಯಾಂತ್ರೀಕೃತ ತೋಟಗಾರಿಕೆಗಾಗಿ ಇಲಾಖೆಯಲ್ಲಿ ಜಾರಿಯಲ್ಲಿರುವ ವಿವಿಧ ಯೋಜನೆ / ಕಾರ್ಯಕ್ರಮಗಳಾವುವು ; (ಯೋಜನೆಯ ಮಾರ್ಗಸೂಚಿಯೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಉಡುಪಿ ಜಿಲ್ಲೆಯಲ್ಲಿ ಯಾಂತ್ರೀಕೃತ ತೋಟಗಾರಿಕೆ ಯೋಜನೆಗಳಲ್ಲಿ ನಿಗದಿಪಡಿಸಿದ ಫಲಾನುಭವಿಗಳ ಗುರಿ. ಆರ್ಥಿಕ ಭೌತಿಕ ಸಾಧನೆ, ಗುರಿ ಸಾಧಿಸಲು ಬಾಕಿ ಉಳಿದಿರುವುದು ಎಷ್ಟು ; (ತಾಲ್ಲೂಕುವಾರು, ಗ್ರಾಮವಾರು, ಯೋಜನೆವಾರು ಮಾಹಿತಿ ನೀಡುವುದು)

(ಇ) ಕೂಲಿ ಕಾರ್ಮಿಕರ ಕೊರತೆಯ ಹಿನ್ನಲೆಯಲ್ಲಿ, ಯಾಂತ್ರೀಕೃತ ತೋಟಗಾರಿಕೆಗೆ ಹೆಚ್ಚು ಉತ್ತೇಜನ ನೀಡುವ ನಿಟ್ಟಿನಲ್ಲಿ ಸರ್ಕಾರ ಕೈಗೊಳ್ಳುವ ಮುಂದಿನ ಯೋಜನೆಗಳಾವುವು ?

## ಬಸ್ ನಿಲ್ದಾಣಗಳಲ್ಲಿ ಸ್ವಚ್ಛತೆ ಇಲ್ಲದಿರುವ ಬಗ್ಗೆ

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೯೩೭ (೨೨೨೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಸಾರಿಗೆ ಸಂಸ್ಥೆಯ ಬಸ್ ನಿಲ್ದಾಣಗಳಲ್ಲಿ ಉಪಹಾರ ಗೃಹ ಮತ್ತು ಶೌಚಾಲಯಗಳ ವ್ಯವಸ್ಥೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ; (ಮಾಹಿತಿ ನೀಡುವುದು)

(ಆ) ಬಸ್ ನಿಲ್ದಾಣಗಳಲ್ಲಿರುವ ಶೌಚಾಲಯಗಳಲ್ಲಿ ಸಾರ್ವಜನಿಕರಿಂದ ಶುಲ್ಕ ಪಡೆದರೂ ಸ್ವಚ್ಛತೆಯನ್ನು ಕಾಪಾಡುತ್ತಿಲ್ಲದಿರುವುದರಿಂದ, ಖಾಸಗಿಯವರಿಗೆ ವಹಿಸಿ ಸ್ವಚ್ಛತೆಯನ್ನು ಕಾಪಾಡುವ ವ್ಯವಸ್ಥೆ ಮಾಡಲಾಗುವುದೇ ? (ಮಾಹಿತಿ ನೀಡುವುದು)

## ರಾಜ್ಯದ ಗ್ರಾಮ ಪಂಚಾಯಿತಿಗಳಿಗೆ ಕಳೆದ ೩ ವರ್ಷಗಳಲ್ಲಿ ಬಿಡುಗಡೆಯಾದ ಅನುದಾನದ ಕುರಿತು

**ಶ್ರೀ ಹೆಚ್.ಎಂ.ರಮೇಶ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೯೩೮ (೨೩೦೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ರಾಜ್ಯದಲ್ಲಿನ ಗ್ರಾಮ ಪಂಚಾಯಿತಿಗಳಿಗೆ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು ; ಈ ಅನುದಾನವನ್ನು ಯಾವ ಯಾವ ಉದ್ದೇಶಗಳಿಗಾಗಿ ಖರ್ಚು ಮಾಡಲಾಗಿದೆ ; (ಗ್ರಾಮ ಪಂಚಾಯಿತಿವಾರು ವಿವರ ನೀಡುವುದು)

(ಆ) ಸರ್ಕಾರದ ಯಾವ ಯಾವ ಕಾರ್ಯಕ್ರಮ / ಯೋಜನೆಗಳು ಗ್ರಾಮ ಪಂಚಾಯಿತಿಗಳ ಮೂಲಕ ಜಾರಿಗೆ ಬರುತ್ತಿವೆ ; ಈ ಕಾರ್ಯಕ್ರಮ / ಯೋಜನೆಗಳಿಗಾಗಿ ಕಳೆದ ೩ ವರ್ಷಗಳಲ್ಲಿ ಸರ್ಕಾರವು ಬಿಡುಗಡೆ ಮಾಡಿರುವ ಅನುದಾನವೆಷ್ಟು ; ಇದರಲ್ಲಿ ಖರ್ಚಾದ ಅನುದಾನವೆಷ್ಟು ; (ಫಲಾನುಭವಿ ವಿವರಗಳೊಂದಿಗೆ ಗ್ರಾಮ ಪಂಚಾಯಿತಿವಾರು ವಿವರ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ಈ ಗ್ರಾಮ ಪಂಚಾಯಿತಿಗಳು ಕರಗಳ ರೂಪದಲ್ಲಿ ಸಾರ್ವಜನಿಕರಿಂದ ಸ್ವೀಕರಿಸಿರುವ ಆದಾಯವೆಷ್ಟು ; ಈ ಆದಾಯವನ್ನು ಯಾವ ಯಾವ ಉದ್ದೇಶಗಳಿಗಾಗಿ ಖರ್ಚು ಮಾಡಲಾಗಿದೆ ; (ಗ್ರಾಮ ಪಂಚಾಯಿತಿವಾರು ವಿವರ ನೀಡುವುದು)

(ಈ) ರಾಜ್ಯದಲ್ಲಿ ಯಾವ ಗ್ರಾಮ ಪಂಚಾಯಿತಿಗಳು ಸ್ವಂತ ಕಟ್ಟಡಗಳನ್ನು ಹೊಂದಿವೆ; ಹಾಗೂ ಯಾವ ಗ್ರಾಮ ಪಂಚಾಯಿತಿಗಳು ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿವೆ ಮತ್ತು ಇದಕ್ಕೆ ಪಾವತಿಸುತ್ತಿರುವ ಬಾಡಿಗೆ ಮೊತ್ತವೆಷ್ಟು ? (ಗ್ರಾಮ ಪಂಚಾಯಿತಿವಾರು ವಿವರ ನೀಡುವುದು)

## ಕಳೆದ ೩ ವರ್ಷಗಳಿಂದ ಅಲ್ಪ ಸಂಖ್ಯಾತರ ಅಭಿವೃದ್ಧಿ ಕುರಿತು

**ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೧೯೩೫ (೨೨೯೮) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪ ಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ರಾಜ್ಯದಲ್ಲಿ ವಿವಿಧ ಯೋಜನೆಗಳಡಿ ಮಂಜೂರಾದ ಅನುದಾನವೆಷ್ಟು; ಇದರಲ್ಲಿ ಬಿಡುಗಡೆಯಾದ ಅನುದಾನವೆಷ್ಟು; ಬಿಡುಗಡೆಯಾಗದೇ ಬಾಕಿ ಉಳಿದಿರುವ ಅನುದಾನವೆಷ್ಟು; ಬಾಕಿ ಉಳಿಯಲು ಕಾರಣಗಳೇನು ; ಯಾವಾಗ ಬಿಡುಗಡೆ ಮಾಡಲಾಗುವುದು; (ವಿವರ ನೀಡುವುದು)

(ಆ) ಈ ಅನುದಾನದಲ್ಲಿ ಕೈಗೊಂಡ ಕಾಮಗಾರಿಗಳು ಯಾವುವು ; ಈ ಕಾಮಗಾರಿಗಳ ಮೊತ್ತವೆಷ್ಟು ; ಕಾಮಗಾರಿಗಳನ್ನು ನಿರ್ವಹಿಸಿದ ಗುತ್ತಿಗೆದಾರರು ಯಾರು ; (ಕಾಮಗಾರಿ ಹೆಸರು, ಗ್ರಾಮ ಮತ್ತು ತಾಲ್ಲೂಕಿನ ವಿವರ ನೀಡುವುದು)

(ಇ) ರಾಜ್ಯದಲ್ಲಿ ಅಲ್ಪಸಂಖ್ಯಾತರು ಹೆಚ್ಚಿನ ಸಂಖ್ಯೆಯಲ್ಲಿದ್ದು, ಮೂಲಭೂತ ಸೌಲಭ್ಯಗಳಿಲ್ಲದೆ ಅವರು ಹಿಂದುಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅಲ್ಪಸಂಖ್ಯಾತರಿಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## KRIDL ವತಿಯಿಂದ ಖರೀದಿಸಿರುವ ಸಾಮಗ್ರಿಗಳ ಬಗ್ಗೆ

**ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೧೯೪೦ (೨೨೯೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ KRIDL ವತಿಯಿಂದ ಖರೀದಿ ಮಾಡಿರುವ ಕಟ್ಟಡ ಸಾಮಗ್ರಿಗಳು ಯಾವುವು; ಖರೀದಿಸಿದ್ದ ಪ್ರಮಾಣ ಎಷ್ಟು; ಇದಕ್ಕಾಗಿ ವೆಚ್ಚವಾದ ಅನುದಾನ ಎಷ್ಟು ; ಸದರಿ ಸಾಮಗ್ರಿಗಳನ್ನು ಖರೀದಿಸಲು KTPP ನಿಯಮ ಪಾಲನೆ ಮಾಡಲಾಗಿತ್ತೇ ; (ದಾಖಲೆಗಳ ಸಹಿತ ವಿವರ ನೀಡುವುದು)

(ಆ) ಖರೀದಿಸಲಾದ ಸಾಮಗ್ರಿಗಳನ್ನು ಯಾವ ಕಾಮಗಾರಿಗಳಿಗೆ ಎಷ್ಟು ಪ್ರಮಾಣದಲ್ಲಿ ಬಳಸಲಾಗಿದೆ ; (ವಿವರವಾದ ಮಾಹಿತಿ ನೀಡುವುದು)

(ಇ) ಸಾಮಗ್ರಿ ಖರೀದಿ ವಿಚಾರದಲ್ಲಿ ಸಾಕಷ್ಟು ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಕ್ರಮ ತೆಗೆದುಕೊಳ್ಳಲಾಗಿದೆ ;

(ಈ) ಖರೀದಿಸಿದ ಸಾಮಗ್ರಿಗಳ ಗುಣಮಟ್ಟವನ್ನು ಯಾವ ಸಂಸ್ಥೆಯು ಪ್ರಮಾಣೀಕರಿಸಿದೆ ? (ದಾಖಲೆ ಒದಗಿಸುವುದು)

## ರಾಜ್ಯದಲ್ಲಿ ಕೃಷಿ ಇಲಾಖೆಯಿಂದ ಕೈಗೆತ್ತಿಕೊಂಡಿರುವ ಫಲಾನುಭವಿ ಯೋಜನೆ ಕುರಿತು

**ಶ್ರೀ ಹೆಚ್.ಎಂ.ರಮೇಶ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೯೪೧ (೨೩೦೨) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೃಷಿ ಇಲಾಖೆ ವತಿಯಿಂದ ಕೈಗೊಳ್ಳುತ್ತಿರುವ ಫಲಾನುಭವಿ ಆಧಾರಿತ ಯೋಜನೆಗಳು ಯಾವುವು ; ಫಲಾನುಭವಿಗಳ ಆಯ್ಕೆಗೆ ಇರುವ ಮಾನದಂಡಗಳು ಯಾವುವು ;

(ಆ) ರಾಜ್ಯದಲ್ಲಿ ಕಳೆದ ೩ ವರ್ಷಗಳಲ್ಲಿ ಈ ಯೋಜನೆಗಳಡಿ ಬಿಡುಗಡೆಯಾದ ಅನುದಾನ, ವೆಚ್ಚ ಹಾಗೂ ಫಲಾನುಭವಿಗಳ ವಿವರಗಳನ್ನು ಯೋಜನೆವಾರು / ತಾಲ್ಲೂಕುವಾರು ವಿವರವಾದ ಮಾಹಿತಿಗಳನ್ನು ಒದಗಿಸುವುದು ;

(ಇ) ರಾಜ್ಯದಲ್ಲಿ ಕಳೆದ ೩ ವರ್ಷಗಳಲ್ಲಿ ಕೃಷಿಯಿಂದ ಆರ್ಥಿಕ ತೊಂದರೆಗೊಳಗಾಗಿ ಆತ್ಮಹತ್ಯೆ ಮಾಡಿಕೊಂಡಿರುವ ರೈತರುಗಳ ವಿವರ ಹಾಗೂ ಇವರುಗಳಿಗೆ ಸರ್ಕಾರದಿಂದ ದೊರಕಿರುವ ಪರಿಹಾರದ ವಿವರಗಳನ್ನು ಒದಗಿಸುವುದು ;

(ಈ) ಕಳೆದ ೩ ವರ್ಷಗಳಲ್ಲಿ ರಾಜ್ಯದಲ್ಲಿ ಕೃಷಿ ಕ್ಷೇತ್ರದ ಉತ್ಪಾದನೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಉ) ಕೃಷಿ ಇಲಾಖೆಯಿಂದ ಯಾವ ಯಾವ ಬೆಳೆಗಳಿಗೆ ಬೆಂಬಲ ಬೆಲೆ ಘೋಷಿಸಲಾಗಿದೆ ; ಎಷ್ಟು ಬೆಂಬಲ ಬೆಲೆ ನಿಗದಿಪಡಿಸಲಾಗಿದೆ ? (ವಿವರ ನೀಡುವುದು)

## ವಿಕಲಚೇತನರ ಅಭಿವೃದ್ಧಿ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು):–**

೧೯೪೨ (೨೨೬೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ,. ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಉದ್ಯೋಗಸ್ಥ ವಿಶೇಷ ಚೇತನ ಮಹಿಳೆಯರಿಗೆ ಮತ್ತು ವಿದ್ಯಾರ್ಥಿನಿಯರಿಗಾಗಿ ಎಷ್ಟು ವಸತಿ ನಿಲಯಗಳನ್ನು ಸ್ಥಾಪಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಕಳೆದ ಎರಡು ವರ್ಷಗಳಲ್ಲಿ ವಿಕಲ ಚೇತನ ಹೆಣ್ಣು ಮಕ್ಕಳಿಗಾಗಿ ರಾಜ್ಯ ಸರ್ಕಾರವು ಕೈಗೊಂಡ ಕಾರ್ಯಕ್ರಮಗಳು ಯಾವುವು ; ಈ ಕಾರ್ಯಕ್ರಮಗಳಿಗೆ ಎಷ್ಟು ವೆಚ್ಚ ಮಾಡಲಾಗಿದೆ ; ಈ ಯೋಜನೆಗಳ ಫಲಾನುಭವಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ವಿಶೇಷ ಚೇತನ ಮಕ್ಕಳಿಗಾಗಿ ಸರ್ಕಾರವು ಯಾವ ಯಾವ ಯೋಜನೆಗಳನ್ನು ಹಮ್ಮಿಕೊಂಡಿದೆ ? (ವಿವರ ನೀಡುವುದು)

## ಭೂಸಾರ ಮತ್ತು ಜಲ ಸಂರಕ್ಷಣೆ ಕುರಿತು

**ಶ್ರೀ ಎನ್. ರವಿಕುಮಾರ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು):–**

೧೯೪೩ (೨೨೬೭) ಮಾನ್ಯ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆಯಲ್ಲಿ ಭೂಸಾರ ಮತ್ತು ಜಲ ಸಂರಕ್ಷಣೆ ಕುರಿತು ಮಾಡಿರುವ ವೆಚ್ಚವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಭೂಸಾರ ರಕ್ಷಣೆಗೆ ಯಾವ ಯಾವ ಯೋಜನೆಗಳನ್ನು ಕೈಗೊಳ್ಳಲಾಗಿದೆ ; ಇದರಿಂದ ತೋಟಗಾರಿಕಾ ಬೆಳೆಗಳ ಮೇಲೆ ಆದ ಪರಿಣಾಮಗಳೇನು ;

(ಇ) ಕಳೆದ ಮೂರು ವರ್ಷಗಳಲ್ಲಿ ತೋಟಗಾರಿಕಾ ಬೆಳೆಗಳ ಮೇಲೆ ಎಷ್ಟು ಸಂಶೋಧನೆಗಳು ಆಗಿವೆ ; ಈ ಸಂಶೋಧನೆಗಳಿಂದ ಕೃಷಿಕರಿಗೆ ಯಾವ ರೀತಿಯ ಉಪಯೋಗವಾಗಿದೆ ?

## ಕೃಷಿಕರಿಗೆ ಬೀಜಗಳನ್ನು ರಿಯಾಯಿತಿ ದರದಲ್ಲಿ ನೀಡುವ ಬಗ್ಗೆ

**ಶ್ರೀ ಎನ್. ರವಿಕುಮಾರ್ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು):–**

೧೯೪೪ (೨೨೬೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೃಷಿಕರಿಗೆ ಯಾವ ಯಾವ ಬೀಜಗಳನ್ನು ರಿಯಾಯಿತಿ ದರದಲ್ಲಿ ನೀಡಲಾಗುತ್ತಿದೆ ; ಸದರಿ ಬೀಜಗಳ ಮೂಲ ಬೆಲೆ, ಸರ್ಕಾರ ನೀಡುವ ಸಬ್ಸಿಡಿ ಹಾಗೂ ರೈತರುಗಳಿಗೆ ಬೀಜಗಳನ್ನು ಖರೀದಿ ಮಾಡಲು ನೀಡುವ ದರದ ವಿವರ ನೀಡುವುದು ;

(ಆ) ಕಳೆದ ಎರಡು ವರ್ಷಗಳಲ್ಲಿ ಕೃಷಿಕರಿಗೆ ಬೀಜಗಳನ್ನು ರಿಯಾಯಿತಿ ದರದಲ್ಲಿ ನೀಡಲು ಎಷ್ಟು ಅನುದಾನ ವೆಚ್ಚ ಮಾಡಲಾಗಿದೆ ; (ಜಿಲ್ಲಾವಾರು, ಬೆಳೆವಾರು ಮಾಹಿತಿ ನೀಡುವುದು)

(ಇ) ರಿಯಾಯಿತಿ ದರದಲ್ಲಿ ಬೀಜವನ್ನು ಖರೀದಿಸಿದ ಕೃಷಿಕರ ಸಂಖ್ಯೆ ಎಷ್ಟು ? (ಜಿಲ್ಲಾವಾರು, ಬೆಳೆವಾರು ಮಾಹಿತಿ ನೀಡುವುದು)

## ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ನೀಡುವ ಬಗ್ಗೆ

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):–**

೧೯೪೫ (೨೨೬೫) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಅಲ್ಪಸಂಖ್ಯಾತರ ಸಮುದಾಯದ ಎಷ್ಟು ವಿದ್ಯಾರ್ಥಿಗಳು ಐಐಟಿ, ಐಐಎಂ, ಐಐಸ್ಸಿಎಮ್ಸ್ ಮುಂತಾದ ವಿಶ್ವವಿದ್ಯಾಲಯಗಳಲ್ಲಿ ಪ್ರವೇಶಾತಿಯನ್ನು ಪಡೆದಿದ್ದಾರೆ, ಇದರಲ್ಲಿ ಎಷ್ಟು ವಿದ್ಯಾರ್ಥಿಗಳಿಗೆ ಐಐಸ್ಸಿಎಮ್ಸ್ ಪ್ರೋತ್ಸಾಹ ಧನ ನೀಡಲಾಗಿದೆ; ಇದಲ್ಲಿ ಜೈನ್, ಭೌದ್ಧ, ಸಿಖ್ ಸಮುದಾಯಗಳ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ;

(ಆ) ೨೦೧೮-೧೯ ಮತ್ತು ೨೦೧೯-೨೦ರ ಶೈಕ್ಷಣಿಕ ಸಾಲಿನಲ್ಲಿ ಬಿ.ಎಡ್., ಡಿ.ಎಡ್, ಕೋರ್ಸ್ ಮಾಡುತ್ತಿರುವ ಎಷ್ಟು ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ನೀಡಲಾಗಿದೆ; ಅದರಲ್ಲಿ ಜೈನ್, ಭೌದ್ಧ, ಸಿಖ್ ಸಮುದಾಯಗಳ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ;

(ಇ) ೨೦೧೯-೨೦ ಮತ್ತು ೨೦೨೦-೨೧ರ ಶೈಕ್ಷಣಿಕ ಸಾಲಿನಲ್ಲಿ ಎಷ್ಟು ವಿದ್ಯಾರ್ಥಿಗಳು ಅರಿವು ಯೋಜನೆಯ ಫಲಾನುಭವಿಗಳಾಗಿದ್ದಾರೆ; ಅದರಲ್ಲಿ ಜೈನ್, ಬೌದ್ಧ, ಸಿಖ್ ಸಮುದಾಯಗಳ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ?

## ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಡಿಯಲ್ಲಿ ಸ್ವಮಿತ್ವ (SVAMITVA) ಯೋಜನೆ ಕುರಿತು

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ) :-**

೧೯೪೬ (೨೨೮೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸ್ವಮಿತ್ವ (SVAMITVA) ಯೋಜನೆಯುನ್ನು ಪ್ರಾರಂಭಿಸಲಾಗಿದೆಯೇ; ಪ್ರಾರಂಭಿಸಿದ್ದಲ್ಲಿ, ಅದರ ಮಾಹಿತಿ ನೀಡುವುದು;

(ಆ) ಸದರಿ ಯೋಜನೆಯ ಲಾಭ ಪಡೆಯಲು ಸಾರ್ವಜನಿಕರು ಹಣವನ್ನು ಸಂದಾಯ ಮಾಡಬೇಕಾಗಿದೆಯೇ; (ಮಾಹಿತಿ ನೀಡುವುದು)

(ಇ) ಸದರಿ ಯೋಜನೆಯನ್ನು ರಾಜ್ಯಾದಾದ್ಯಂತ ಯಾವ ಕಾಲಮಿತಿಯಲ್ಲಿ ಅಳವಡಿಸಿಕೊಳ್ಳಲಾಗುವುದು ? (ವಿವರ ನೀಡುವುದು)

## ಬೆಂಗಳೂರು ಮಹಾನಗರದಲ್ಲಿ ಸಾರ್ವಜನಿಕ ಸಂಚಾರ ವಾಹನಗಳ ಕುರಿತು

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ) :–**

೧೯೪೭ (೨೨೮೯) ಮಾನ್ಯ ಉಪ ಮುಖ್ಯಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮಹಾನಗರದಲ್ಲಿ ದೈನಂದಿನವಾಗಿ ಸಂಚಾರ ನಡೆಸುವ ವಾಹನಗಳ ಅಂದಾಜು ಸಂಖ್ಯೆ ಎಷ್ಟು; ಈ ಪೈಕಿ ಸಾರ್ವಜನಿಕ ಸಂಚಾರ ಸೇವೆಯಲ್ಲಿ ತೊಡಗಿರುವ ಬಸ್ಸು ಟ್ಯಾಕ್ಸಿ ಮತ್ತು ಆಟೋರಿಕ್ಷಾಗಳ ಹಾಗೂ ಇತರೆ ವಾಹನಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಸದರಿ ಬಸ್ಸು, ಟ್ಯಾಕ್ಸಿ ಮತ್ತು ಅಟೋರಿಕ್ಷಾ ವಾಹನಗಳ ಚಾಲಕರು ಸಂಚಾರ ನಿಯಮಗಳನ್ನು ಉಲ್ಲಂಘಿಸಿ ಮೊಬೈಲ್‌ನಲ್ಲಿ ಮಾತನಾಡುತ್ತ ವಾಹನಗಳನ್ನು ಚಾಲನೆ ಮಾಡುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಪೊಲೀಸ್ ಇಲಾಖೆಯಿಂದ ಸಾರಿಗೆ ಇಲಾಖೆಗೆ ಎಷ್ಟು ಪ್ರಕರಣಗಳ ಕುರಿತು ವರದಿ ಸಲ್ಲಿಸಿರುತ್ತಾರೆ; (ವಿವರ ನೀಡುವುದು)

(ಇ) ನಮ್ಮ ಮೆಟ್ರೋ ರೈಲು ನಿಲ್ದಾಣದಿಂದ ಸಾರ್ವಜನಿಕರಿಗೆ ತಮ್ಮ ಪ್ರದೇಶಕ್ಕೆ ತಲುಪಲು (Last Mile Connectivity) ಸರ್ಕಾರದಿಂದ ಸಾರ್ವಜನಿಕ ಸಾರಿಗೆ ಸಂಪರ್ಕ ಜಾಲ ರೂಪಿಸಲಾಗಿದೆಯೇ; ರೂಪಿಸಿದ್ದಲ್ಲಿ, ನಮ್ಮ ಮೆಟ್ರೋ ಹಾಗೂ ಸಾರಿಗೆ ಇಲಾಖೆ ಸಮನ್ವಯ ಸಮಿತಿ ರಚಿಸಲಾಗಿದೆಯೇ; (ವಿವರ ನೀಡುವುದು)

(ಈ) ಬೆಂಗಳೂರು ನಗರದಲ್ಲಿ ವಾಹನ ಸಂಚಾರ ದಟ್ಟಣೆಯನ್ನು (Traffic Density) ತಿಳಿಗೊಳಿಸಿ ಯೋಜನಾಬದ್ಧವಾಗಿ ರಸ್ತೆಗಳನ್ನು ನಿರ್ವಹಿಸಿ ಸಂಚಾರ ಸುಗಮಗೊಳಿಸುವ ಸಮಗ್ರ ಯೋಜನೆ ಸಿದ್ಧಪಡಿಸಲಾಗಿದೆಯೇ; (ವಿವರ ನೀಡುವುದು)

(ಊ) ಈ ವಿಷಯದಲ್ಲಿ ಬಿ.ಬಿ.ಎಂ.ಪಿ., ನಗರ ಸಂಚಾರ ಆರಕ್ಷಕ ವಿಭಾಗ ಪರಿಸರ ಮಾಲಿನ್ಯ ನಿಯಂತ್ರಣ ಇಲಾಖೆ ಮತ್ತು ಜಿಲ್ಲಾಡಳಿತದ ಜೊತೆಗೆ ಸಮನ್ವಯ ಸಾಧಿಸುವ ವ್ಯವಸ್ಥೆ ಇದೆಯೇ ? (ಇದ್ದಲ್ಲಿ, ಕೈಗೊಂಡ ಕ್ರಮಗಳ ಕುರಿತು ವಿವರ ನೀಡುವುದು)

## ಗ್ರಾಮ ಪಂಚಾಯ್ತಿ ಸದಸ್ಯರ ಗೌರವ ಧನದ ಬಗ್ಗೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೯೪೮ (೨೨೩೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗ್ರಾಮ ಪಂಚಾಯ್ತಿ ಸದಸ್ಯರಿಗೆ ಹಾಲಿ ನೀಡುತ್ತಿರುವ ಗೌರವಧನ ಎಷ್ಟು; (ಮಾಹಿತಿ ಒದಗಿಸುವುದು)

(ಆ) ಗ್ರಾಮ ಪಂಚಾಯ್ತಿ ಸದಸ್ಯರಿಗೆ ನೀಡುತ್ತಿರುವ ಗೌರವಧನವನ್ನು ಹೆಚ್ಚಳ ಮಾಡುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ; ; (ಮಾಹಿತಿ ಒದಗಿಸುವುದು)

(ಇ) ಕಳೆದ ಚುನಾವಣೆಗೆ ಮುನ್ನ ಗ್ರಾಮ ಪಂಚಾಯ್ತಿ ಸದಸ್ಯರಾದವರಿಗೆ ನೀಡುವಂತಹ ಗೌರವಧನವನ್ನು ಬಾಕಿ ಉಳಿಸಿಕೊಳ್ಳಲಾಗಿದೆಯೇ ?

## ಸ್ವಂತ ಕಟ್ಟಡ ಇಲ್ಲದ ಗ್ರಾಮ ಪಂಚಾಯತ್ ಬಗ್ಗೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೪೯ (೨೨೩೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿತ್ರದುರ್ಗ ಹಾಗೂ ದಾವಣಗೆರೆ ಜಿಲ್ಲೆಗಳಲ್ಲಿ ಸ್ವಂತ ಕಟ್ಟಡ ಇಲ್ಲದ ಗ್ರಾಮ ಪಂಚಾಯ್ತಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಆ) ಈ ಗ್ರಾಮ ಪಂಚಾಯ್ತಿಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡಿಕೊಡಲು ಗ್ರಾಮೀಣಾಭಿವೃದ್ಧಿ ಇಲಾಖೆ ಕೈಗೊಂಡಿರುವ ಕ್ರಮಗಳೇನು? (ಮಾಹಿತಿ ಒದಗಿಸುವುದು)

## ರಾಜ್ಯದಲ್ಲಿ ಕಳೆದ ೩ ವರ್ಷಗಳಲ್ಲಿ ಆತ್ಮಹತ್ಯೆ ಮಾಡಿಕೊಂಡ ರೈತರ ಬಗ್ಗೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೫೦ (೨೨೩೦) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಆತ್ಮಹತ್ಯೆ ಮಾಡಿಕೊಂಡಿರುವ ರೈತರ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ರೈತರ ಆತ್ಮಹತ್ಯೆಗೆ ಕಾರಣವೇನು; ಈ ಕುರಿತು ತನಿಖೆ ನಡೆದಿದೆಯೇ;

(ಇ) ಆತ್ಮಹತ್ಯೆ ಮಾಡಿಕೊಂಡ ರೈತರ ಕುಟುಂಬದವರಿಗೆ ಪರಿಹಾರ ಧನ ಒದಗಿಸಲಾಗಿದೆಯೇ? (ಮಾಹಿತಿ ಒದಗಿಸುವುದು)

## ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಕೈಗೊಂಡ ಕಾಮಗಾರಿಗಳ ಕುರಿತು

**ಶ್ರೀ ಸುನೀಲ್ ವಲ್ಯಾಪುರ್(ವಿಧಾನಸಭೆಯಿಂದ ಚುನಾಯಿತರಾದವರು):-**

೧೯೫೧ (೨೨೨೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಮೂರು ವರ್ಷಗಳಲ್ಲಿ ಕಲಬುರಗಿ ಜಿಲ್ಲೆಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ವಿವಿಧ ಲೆಕ್ಕಶೀರ್ಷಿಕೆಗಳಲ್ಲಿ ಬಿಡುಗಡೆಯಾಗಿರುವ ಅನುದಾನ ಎಷ್ಟು; (ಲೆಕ್ಕಶೀರ್ಷಿಕೆಗಳವಾರು ಮಾಹಿತಿ ನೀಡುವುದು)

(ಆ) ಈ ಅನುದಾನದಲ್ಲಿ ಕೈಗೆತ್ತಿಕೊಂಡ ಕಾಮಗಾರಿಗಳಾವುವು; (ವಿವರ ನೀಡುವುದು)

(ಇ) ಈ ಕಾಮಗಾರಿಗಳಲ್ಲಿ ಪೂರ್ಣಗೊಂಡಿರುವ ಮತ್ತು ಪೂರ್ಣಗೊಳ್ಳದಿರುವ ಕಾಮಗಾರಿಗಳಾವುವು; ಕೆಲವು ಕಾಮಗಾರಿಗಳು ಅಪೂರ್ಣಗೊಳ್ಳಲು ಕಾರಣಗಳೇನು?

## ಕಲಬುರಗಿ ಜಿಲ್ಲೆಯಲ್ಲಿ ಕೃಷಿ ಉಪಕರಣಗಳ ಖರೀದಿ ಬಗ್ಗೆ

**ಶ್ರೀ ಸುನೀಲ್ ವಲ್ಯಾಪುರ್(ವಿಧಾನಸಭೆಯಿಂದ ಚುನಾಯಿತರಾದವರು):-**

೧೯೫೨ (೨೨೨೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಮೂರು ವರ್ಷಗಳಲ್ಲಿ ಕಲಬುರಗಿ ಜಿಲ್ಲೆಯಲ್ಲಿ ಕೃಷಿ ಉಪಕರಣಗಳು ಮತ್ತು ವಸ್ತುಗಳ ಖರೀದಿಗಾಗಿ ಸರ್ಕಾರ ಮಾಡಿರುವ ವೆಚ್ಚವೆಷ್ಟು;

(ಆ) ಈ ಯೋಜನೆಯ ಲಾಭ ಪಡೆದುಕೊಂಡ ಫಲಾನುಭವಿಗಳು ಎಷ್ಟು? (ಮಾಹಿತಿ ಒದಗಿಸುವುದು)

## ಕಲಬುರಗಿ ಜಿಲ್ಲೆಯಲ್ಲಿ ತೊಗರಿ ಬೆಳೆ ಬಿತ್ತನೆ ಕುರಿತು

**ಶ್ರೀ ಸುನೀಲ್ ವಲ್ಯಾಪುರ್(ವಿಧಾನಸಭೆಯಿಂದ ಚುನಾಯಿತರಾದವರು):–**

೧೯೫೩ (೨೨೨೫) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನಲ್ಲಿ ಎಷ್ಟು ಹೆಕ್ಟೇರ್‌ನಲ್ಲಿ ತೊಗರಿ ಬೆಳೆ ಮತ್ತು ಇನ್ನಿತರ ಬೆಳೆ ಬಿತ್ತನೆ ಮಾಡಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಪ್ರವಾಹದಿಂದ ಎಷ್ಟು ಹೆಕ್ಟೇರ್ ತೊಗರಿ ಬೆಳೆ ಮತ್ತು ಇನ್ನಿತರ ಬೆಳೆ ನಾಶವಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಪರಿಹಾರಕ್ಕಾಗಿ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು ಮತ್ತು ರೈತರಿಗೆ ವಿತರಿಸಲಾದ ಪರಿಹಾರವೆಷ್ಟು? (ವಿವರ ನೀಡುವುದು)

## ಭೂ ಸೇನಾ ನಿಗಮದಿಂದ ಕೈಗೊಂಡ ಕಾಮಗಾರಿಗಳ ಕುರಿತು

**ಶ್ರೀ ಸುನೀಲ್ ವಲ್ಯಾಪುರ್(ವಿಧಾನಸಭೆಯಿಂದ ಚುನಾಯಿತರಾದವರು):–**

೧೯೫೪ (೨೨೨೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ  ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ಕಲಬುರಗಿ ಜಿಲ್ಲೆಯಲ್ಲಿ ಭೂ ಸೇನಾ ನಿಗಮದಿಂದ ಕೈಗೊಂಡ ಕಾಮಗಾರಿಗಳಾವುವು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಪ್ರಸ್ತುತ ಈ ಕಾಮಗಾರಿಗಳು ಯಾವ ಹಂತದಲ್ಲಿವೆ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಸದರಿ ಕಾಮಗಾರಿಗಳಿಗೆ ಬಿಡುಗಡೆ ಮಾಡಿದ ಅನುದಾನ ಎಷ್ಟು? (ಮಾಹಿತಿ ನೀಡುವುದು)

## ತೋಟಗಾರಿಕೆ ಅಭಿವೃದ್ಧಿ ಯೋಜನೆಗಳ ಕುರಿತು

**ಶ್ರೀ ಸುನೀಲ್ ವಲ್ಯಾಪುರ್(ವಿಧಾನಸಭೆಯಿಂದ ಚುನಾಯಿತರಾದವರು):–**

೧೯೫೫ (೨೨೨೭) ಮಾನ್ಯ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೨೦–೨೧ನೇ ಸಾಲಿನಲ್ಲಿ ತೋಟಗಾರಿಕೆ ಕ್ಷೇತ್ರ ಅಭಿವೃದ್ಧಿಗಾಗಿ ಸರ್ಕಾರದ ವತಿಯಿಂದ ಹಮ್ಮಿಕೊಳ್ಳಲಾಗಿರುವ ಯೋಜನೆಗಳಾವುವು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಯೋಜನೆಗಳಿಗೆ ಸರ್ಕಾರದಿಂದ ಬಿಡುಗಡೆಯಾಗಿರುವ ಅನುದಾನವೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ವಿವಿಧ ಕ್ಷೇತ್ರಗಳಿಗೆ ಬಿಡುಗಡೆಗೊಳಿಸಿದ ಅನುದಾನ ಎಷ್ಟು? (ವಿವರ ನೀಡುವುದು)

## ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ನೌಕರರ ಸೇವೆಯ ಬಗ್ಗೆ

**ಶ್ರೀ ಸುನೀಲ್ ಗೌಡ ಬಸನಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೯೫೬ (೨೨೩೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೦೨ ರಿಂದ ೨೦೧೨ರ ವರೆಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವ್ಯಾಪ್ತಿಯಲ್ಲಿ (ಸಚಿವಾಲಯ ಸೇರಿದಂತೆ) ಸರ್ಕಾರಿ ನೌಕರರಲ್ಲದ ದಿನಗೂಲಿ ಹಾಗೂ ಕರಾರು ಒಪ್ಪಂದದ ಮೇಲೆ ಕೆಲಸ ಮಾಡಿದ ನೌಕರರುಗಳ ಸಂಖ್ಯೆ ಎಷ್ಟು; (ಹುದ್ದೆವಾರು ನೌಕರರುಗಳ ಹೆಸರು, ನೇಮಕಾತಿ ಆದೇಶ ಪ್ರತಿ, ವೇತನದ ಮಾಹಿತಿ ಒದಗಿಸುವುದು)

(ಆ) ಸದರಿ ದಿನಗೂಲಿ ಹಾಗೂ ಕರಾರು ಒಪ್ಪಂದದ ಮೇಲೆ ಕೆಲಸ ಮಾಡಿದ ನೌಕರರುಗಳಿಗೆ ಕ.ಸ.ಸೇ(ಪ್ರೊಬೇಷನರಿ) ನಿಯಮಾವಳಿಗಳು ೧೯೭೭ ನಿಯಮ ೫ ರೀತ್ಯಾ ಪರೀಕ್ಷಾರ್ಥ ಅವಧಿ ಘೋಷಿಸಿರುವುದು ನಿಜವೇ; ಹೌದಾದಲ್ಲಿ, ಯಾವ ಮಾನದಂಡದ ರೀತ್ಯಾ ಸದರಿ ನೌಕರರುಗಳಿಗೆ ಪರೀಕ್ಷಾರ್ಥ ಅವಧಿ ಘೋಷಿಸಲಾಗಿದೆ; (ಪರೀಕ್ಷಾರ್ಥ ಅವಧಿ ಘೋಷಿಸಿದ ನೌಕರರ ಹೆಸರುಗಳೊಂದಿಗೆ ಆದೇಶದ ಪ್ರತಿ ಹಾಗೂ ಇಲಾಖಾ ಪರೀಕ್ಷೆಗಳ ಪ್ರಮಾಣ ಪತ್ರಗಳನ್ನು ಮತ್ತು ಪರೀಕ್ಷಾರ್ಥ ಅವಧಿ ಘೋಷಿಸದೆ ಇರುವ ನೌಕರರ ವಿವರ ಒದಗಿಸುವುದು)

(ಇ) ೨೦೧೦ ರಿಂದ ೨೦೨೧ರ ಅವಧಿಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಪತ್ರಾಂಕಿತ ಹುದ್ದೆಗಳನ್ನು ಬಡ್ತಿ ನೀಡಲು ನಿಯಮಾನುಸಾರ ಇಲಾಖಾ ಮುಂಬಡ್ತಿ ಸಮಿತಿ ಸಭೆಯನ್ನು ನಡೆಸಲಾಗಿದೆಯೇ; ನಡೆಸಿದ್ದಲ್ಲಿ, ಸದರಿ ಅವಧಿಯಲ್ಲಿ ಯಾವ ಯಾವ ಅಧಿಕಾರಿಗಳಿಗೆ ಯಾವ ಯಾವ ಹುದ್ದೆಗಳಿಗೆ ಮುಂಬಡ್ತಿ ನೀಡಲಾಗಿದೆ? (ಆದೇಶದ ಪ್ರತಿಗಳೊಂದಿಗೆ ಇಲಾಖಾ ಮುಂಬಡ್ತಿ ಸಮಿತಿ ಸಭೆಯ ನಡಾವಳಿ ಪ್ರತಿಗಳನ್ನು ಒದಗಿಸುವುದು)

## ಪಿ.ಡಿ.ಓ., ಎ.ಡಿ ಹಾಗೂ ಕಾರ್ಯನಿರ್ವಾಹಕ ಅಧಿಕಾರಿಗಳ ಸೇವೆಗಳಿಗೆ ಸಂಬಂಧಿಸಿದಂತೆ

**ಶ್ರೀ ಸುನೀಲ್ ಗೌಡ ಬಸನಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೯೫೭ (೨೨೩೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೦ ರಿಂದ ೨೦೨೦ ರವರೆಗೆ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಸಹಾಯಕ ನಿರ್ದೇಶಕ, ಕಾರ್ಯನಿರ್ವಾಹಕ, ಉಪಕಾರ್ಯದರ್ಶಿ ಹುದ್ದೆಗಳಲ್ಲಿದ್ದ ಎಷ್ಟು ಜನರಿಗೆ ಕ.ನಾ.ಸೇ(ಸಾಮಾನ್ಯ ನೇಮಕಾತಿ) ನಿಯಮಗಳು, ೧೯೭೭ರ ನಿಯಮ ೧೯ (೩)(c) ಪ್ರಕಾರ ಬಡ್ತಿ ನೀಡಿ ಆದೇಶ ಹೊರಡಿಸಲಾಗಿದೆ; (ಸದರಿ ಕಡತದ ಟಿಪ್ಪಣಿ ಪ್ರತಿ ಹಾಗೂ ಆದೇಶದ ಪ್ರತಿಗಳನ್ನು ಒದಗಿಸುವುದು)

(ಆ) ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ದಿನಾಂಕ:೧೮-೧೧-೨೦೧೩ ರ ರಾಜ್ಯ ಕರಡು ಜೇಷ್ಠತಾ ಪಟ್ಟಿಯಲ್ಲಿ, ಕೆ.ಸಿ.ಎಸ್.ನಿಯಮ ೩೨ರಡಿಯಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯಾಗಿ ಹೆಚ್ಚುವರಿ ಪ್ರಭಾರ ಪಡೆದು ಪೂರ್ವಾನ್ವಯ ದಿನಾಂಕದಿಂದಲೇ ಮುಂಬಡ್ತಿ ನೀಡಿರುವುದು ಕಾನೂನು ಬಾಹಿರ ಎಂದು ಪಿ.ಡಿ.ಓಗಳು ಆಕ್ಷೇಪಣೆ ವ್ಯಕ್ತ ಪಡಿಸಿರುವುದು ನಿಜವೇ; ಹೌದಾದಲ್ಲಿ, ಈ ಕುರಿತು ಸಂಬಂಧಪಟ್ಟ ಜಿಲ್ಲಾ ಪಂಚಾಯಿತಿಗಳಿಗೆ ಇಲಾಖೆಯು ಪತ್ರ ಬರೆದಿದೆಯೇ; ಹಾಗಿದ್ದಲ್ಲಿ, ಪತ್ರದ ಪ್ರತಿಗಳನ್ನು ಒದಗಿಸುವುದು;

(ಇ) ಈ ಕುರಿತು ಸಂಬಂಧಪಟ್ಟ ಜಿಲ್ಲಾ ಪಂಚಾಯತಿಗಳಿಂದ ಪಡೆದ ದಾಖಲೆಗಳ ಪ್ರತಿಗಳನ್ನು ಇಲಾಖೆಯು ಸ್ವೀಕರಿಸಿದೆಯೇ; ಹೌದಾದಲ್ಲಿ, ಸದರಿ ದಾಖಲೆಗಳನ್ನು ಪರೀಶಿಲಿಸಿ ಕೈಗೊಂಡ ಕ್ರಮಗಳೇನು;

(ಈ) ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತಿಯಲ್ಲಿ ದಿನಾಂಕ:೦೯-೦೩-೨೦೧೦ರಿಂದ ಪೂರ್ವಾನ್ವಯವಾಗುವಂತೆ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಬಡ್ತಿ ನೀಡಿರುವುದು ನಿಜವೇ; ಹೌದಾದಲ್ಲಿ, ಸದರಿ ಬಡ್ತಿ ನೀಡಿರುವುದು ಕಾನೂನು ಬಾಹಿರವಾಗುವುದಲ್ಲವೇ; ಸದರಿ ಕಾನೂನು ಬಾಹಿರ ಬಡ್ತಿ ಪ್ರಕ್ರಿಯೆಗೆ

ಕಾರಣಕರ್ತರಾದ ಅಧಿಕಾರಿಗಳು ಯಾರು ಯಾರು; ಇವರ ವಿರುದ್ಧ ಕೈಗೊಂಡ ಕ್ರಮಗಳೇನು; (ಹೆಸರು, ಪದನಾಮಗಳೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು)

(ಉ) ಕಾನೂನು ಬಾಹಿರವಾಗಿ ಬಡ್ತಿ ಪಡೆದವರು ಪ್ರಸ್ತುತ ಯಾವ ಹುದ್ದೆಯಲ್ಲಿ ಕೆಲಸ ನಿರ್ವಹಿಸುತ್ತಿದ್ದಾರೆ ಹಾಗೂ ಸದರಿಯವರಿಗೆ ಹಿಂಬಡ್ತಿ ನೀಡಲಾಗಿದೆಯೇ; ಹಿಂಬಡ್ತಿ ನೀಡದಿದ್ದಲ್ಲಿ, ಅದಕ್ಕೆ ಕಾರಣವೇನು? (ವಿವರ ಒದಗಿಸುವುದು)

## ಶಾಸಕರುಗಳಿಗೆ ನೀಡಿದ ಫಾಸ್ಟ್ ಟ್ಯಾಗ್ (Fast Tag) ಕಾರ್ಯನಿರ್ವಹಿಸದೆ ಇರುವ ಕುರಿತು

**ಶ್ರೀ ಸುನೀಲ್ ಗೌಡ ಬಸನಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೧೯೫೮ (೨೨೩೭) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಟೋಲ್‌ಗೇಟ್‌ಗಳಲ್ಲಿ ಫಾಸ್ಟ್ ಟ್ಯಾಗ್ (Fast Tag) ಕಡ್ಡಾಯ ಮಾಡಿದ ನಂತರ ಮಾನ್ಯ ಶಾಸಕರುಗಳಿಗೆ ನೀಡಿದ ಫಾಸ್ಟ್‌ಟ್ಯಾಗ್ ಕಾರ್ಯನಿರ್ವಹಿಸುತ್ತಿಲ್ಲದ್ದರಿಂದ ಮಾನ್ಯ ಶಾಸಕರುಗಳ ವಾಹನಗಳಿಗೆ ಪ್ರವೇಶ ನಿರಾಕರಿಸುತ್ತಿರುವುದು ಮತ್ತು ಇದರಿಂದಾಗಿ ಶಾಸಕರುಗಳಿಗೆ ತೊಂದರೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಅದನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಇ) ಈ ಕುರಿತು ಟೋಲ್‌ಗೇಟ್‌ಗಳಿಗೆ ಅಥವಾ ಸಂಬಂಧಪಟ್ಟವರಿಗೆ ನಿರ್ದೇಶನ ನೀಡಲಾಗಿದೆಯೇ; ನೀಡಿದ್ದಲ್ಲಿ, ಸದರಿ ಆದೇಶದ ಪ್ರತಿ ನೀಡುವುದು;

(ಈ) ಸರ್ಕಾರಿ ಅಧಿಕಾರಿಗಳಿಗೆ Fast Tag ವಿತರಿಸುವ ಆಲೋಚನೆ ಸರ್ಕಾರದ ಮುಂದಿದೆಯೇ; ಯಾವ ದರ್ಜೆಯ ಅಧಿಕಾರಿಗಳಿಗೆ Fast Tag ವಿತರಿಸಲಾಗುತ್ತಿದೆ? (ವಿವರ ನೀಡುವುದು)

## ಪಿ.ಡಿ.ಓ ಮತ್ತು ಸಹಾಯಕ ನಿರ್ದೇಶಕರ ಸೇವಾ ಜೇಷ್ಠತೆ ಮತ್ತು ಇತರ ಸೇವೆಗಳ ಕುರಿತು

**ಶ್ರೀ ಸುನೀಲ್ ಗೌಡ ಬಸನಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೧೯೫೯ (೨೨೪೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್‌ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೧ ರಿಂದ ೨೦೨೧ರವರೆಗೆ ಪಿ.ಡಿ.ಓ ವೃಂದದಿಂದ ಸಹಾಯಕ ನಿರ್ದೇಶಕರ ಹುದ್ದೆಗೆ ಬಡ್ತಿ ಹೊಂದಿದವರಲ್ಲಿ, ಸರ್ಕಾರಿ ಸೇವೆಗೆ ಸೇರುವ ಪೂರ್ವದಲ್ಲಿ (ಗ್ರಾಮ ಪಂಚಾಯತಿ ಸಿಬ್ಬಂದಿ, ದಿನಗೂಲಿ ಹುದ್ದೆಯಲ್ಲಿದ್ದಾಗ) ಇಲಾಖಾ ಪರೀಕ್ಷೆ ಬರೆದು, ಇವುಗಳನ್ನು ಪರೀಕ್ಷಾರ್ಥ ಅವಧಿ ಘೋಷಣೆ ಹಾಗೂ ಬಡ್ತಿಗೆ ಪರಿಗಣಿಸಿದ ನೌಕರರೆಷ್ಟು; (ಹೆಸರು ಹಾಗೂ ಇವರ ಇಲಾಖಾ ಪರೀಕ್ಷೆ ಪ್ರಮಾಣ ಪತ್ರದ ಪ್ರತಿ ನೀಡುವುದು)

(ಆ) ಕರ್ನಾಟಕ ಸಿವಿಲ್ ಸೇವಾ (ಸೇವಾ ಮತ್ತು ಕನ್ನಡ ಭಾಷಾ ಪರೀಕ್ಷೆಗಳು) ನಿಯಮಗಳು, ೧೯೭೪ ನಿಯಮ ೪(೨)(ಬಿ)ರಡಿಯ ಸೇವಾ ಪರೀಕ್ಷೆಗಳ ವಿನಾಯತಿ ಅವಧಿಯಲ್ಲಿ ಹಾಗೂ ಅವಧಿ ಮುಗಿದ ನಂತರ ಎಷ್ಟು ಪಿ.ಡಿ.ಓ ಗಳಿಗೆ ಸಹಾಯಕ ನಿರ್ದೇಶಕರ ಹುದ್ದೆಗೆ ನಿಯಮ ಇ೨ರಡಿ ಪ್ರಭಾರ ನೀಡಲಾಗಿದೆ ಮತ್ತು ಎಷ್ಟು ಪಿ.ಡಿ.ಓ ಗಳಿಗೆ ಸ್ಥಾನಪನ್ನ ಬಡ್ತಿ ನೀಡಲಾಗಿದೆ;(ಆದೇಶದ ಪ್ರತಿ ನೀಡುವುದು)

(ಇ) ೧೯೯೪ ರಿಂದ ೨೦೧೦ರವರೆಗೆ ಈ ಹಿಂದೆ ಅಸ್ತಿತ್ವದಲ್ಲಿದ್ದ ಪಂಚಾಯತ್ ವಿಸ್ತರಣಾಧಿಕಾರಿ ಹುದ್ದೆಯ ನೇಮಕಾತಿ ಪ್ರಾಧಿಕಾರದ ಹೆಸರು, ವೃಂದ ಮತ್ತು ನೇಮಕಾತಿ ನಿಯಮದ ಪ್ರತಿ, ವರ್ಷವಾರು ಜೇಷ್ಠತಾ ಪಟ್ಟಿಯ ಪ್ರತಿಗಳನ್ನು ಒದಗಿಸುವುದು;

(ಈ) ನಿರ್ವಹಣಾ ಜೇಷ್ಠತಾ ಪಟ್ಟಿ (Working Seniority list) ಅರ್ಥ ವಿವರಣೆ ನೀಡುವ ಕರ್ನಾಟಕ ನಾಗರೀಕ ಸೇವಾ ನಿಯಮದ ಪ್ರತಿ ಹಾಗೂ ನಿರ್ವಹಣಾ ಜೇಷ್ಠತಾ ಪಟ್ಟಿ ತಯಾರಿಸುವ ಕುರಿತು ಇರುವ ನಿಯಮಗಳೇನು; (ಪ್ರತಿ ಒದಗಿಸುವುದು)

(ಉ) ಪಂಚಾಯತ್ ವಿಸ್ತರಣಾಧಿಕಾರಿಗಳ ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ನಿರ್ವಹಣಾ ಜೇಷ್ಠತಾ ಪಟ್ಟಿಯ (Working Seniority list) ಪ್ರತಿ ಹಾಗೂ ಈ ಜೇಷ್ಠತಾ ಪಟ್ಟಿಯ ಆಧಾರದಲ್ಲಿ ಮುಂಬಡ್ತಿ ನೀಡುವ ಬಗ್ಗೆ ಇರುವ ಕಾಯ್ದೆ/ನಿಯಮದ ಪ್ರತಿ ನೀಡುವುದು ?

## ಗ್ರಾಮ ಪಂಚಾಯತ್ ಸಿಬ್ಬಂದಿ ಇಲಾಖಾ ಪರೀಕ್ಷೆ ಮತ್ತು ಮುಂಬಡ್ತಿ ಕುರಿತು

**ಶ್ರೀ ಸುನೀಲ್ ಗೌಡ ಬಸನಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೯೬೦ (೨೨೭೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಇಲಾಖಾ ಪರೀಕ್ಷೆಗಳನ್ನು ಬರೆಯಲು ಅರ್ಹತೆ ಇರದ ಗ್ರಾಮ ಪಂಚಾಯತಿ ಸಿಬ್ಬಂದಿಗಳು ಅಕ್ರಮವಾಗಿ ಪರೀಕ್ಷೆ ಬರೆದು ಪಡೆದಿರುವ ಪ್ರಮಾಣ ಪತ್ರಗಳನ್ನು ನೀಡಿ ಸರ್ಕಾರಿ ಸೇವೆಯ ಪರೀಕ್ಷಾರ್ಥ ಅವಧಿ ಘೋಷಣೆ ಹಾಗೂ ಮುಂಬಡ್ತಿ ಪಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ,

೧೯೯೪ ರಿಂದ ೨೦೨೧ರವರೆಗೆ ಈ ರೀತಿ ಅಕ್ರಮ ಪರೀಕ್ಷಾರ್ಥ ಅವಧಿ ಘೋಷಣೆ ಹೊಂದಿದ ನೌಕರರ ಸಂಖ್ಯೆ ಎಷ್ಟು; ಸಂಪೂರ್ಣ ಸೇವಾ ವಿವರ ನೀಡುವುದು; (ಇಲಾಖಾ ಪರೀಕ್ಷೆ ಪ್ರಮಾಣ ಪತ್ರಗಳು, ನೇಮಕಾತಿ ಪತ್ರ, ಪರೀಕ್ಷಾರ್ಥ ಅವಧಿ ಹಾಗೂ ಬಡ್ತಿ ಆದೇಶ ಪ್ರತಿಗಳನ್ನು ಒದಗಿಸುವುದು)

(ಆ) ಈ ರೀತಿ ಅಕ್ರಮವಾಗಿ ಸರ್ಕಾರಿ ನೌಕರಿ ಪಡೆದ ನೌಕರರ ಪಟ್ಟಿ ನೀಡುವುದು ಮತ್ತು ಇವರ ಮೇಲೆ ಸರ್ಕಾರ ಯಾವ ಶಿಸ್ತು ಕ್ರಮ ಕೈಗೊಂಡಿದೆ ಅಥವಾ ಕೈಗೊಳ್ಳಲು ಉದ್ದೇಶಿಸಿದೆ; (ವಿವರ ನೀಡುವುದು)

(ಇ) ಕ್ರಮಕೈಗೊಳ್ಳದೆ ಇದ್ದಲ್ಲಿ, ಇದಕ್ಕೆ ಕಾರಣಗಳೇನು; (ಕಾರಣರಾದ ನೌಕರರ ಹೆಸರು ಮತ್ತು ಪದನಾಮ ವಿವರ ಒದಗಿಸುವುದು)

(ಈ) ಜಿಲ್ಲಾ ಪಂಚಾಯತ್ ವಿಜಯಪುರ ಇವರು ಅಕ್ರಮ ಇಲಾಖಾ ಪರೀಕ್ಷೆಯ ಪ್ರಮಾಣ ಪತ್ರಗಳನ್ನು ಪರಿಗಣಿಸುವ ಕುರಿತು ಮಾರ್ಗದರ್ಶನ/ಅಭಿಪ್ರಾಯ ಕೋರಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಕೋರಿದ್ದು, ಈ ಬಗ್ಗೆ ಸರ್ಕಾರ ಯಾವ ಆದೇಶ ಹೊರಡಿಸಿದೆ; ಆದೇಶ ಹೊರಡಿಸದೇ ಇದ್ದಲ್ಲಿ ಕಾರಣಗಳೇನು; ಈ ಕುರಿತು ಸರ್ಕಾರದ ನಿಲುವೇನು; ಯಾವ ಕ್ರಮ ಕೈಗೊಳ್ಳಲು ಸರ್ಕಾರ ಉದ್ದೇಶಿಸಿದೆ; (ಈ ವಿಳಂಬಕ್ಕೆ ಕಾರಣರಾದ ಅಧಿಕಾರಿ/ಸಿಬ್ಬಂದಿಯ ಹೆಸರು ಮತ್ತು ಪದನಾಮ ತಿಳಿಸುವುದು)

(ಉ) ಕರ್ನಾಟಕ ಆಡಳಿತ ನ್ಯಾಯಮಂಡಳಿ ಪ್ರಕರಣ ಸಂಖ್ಯೆ ೫೪೪೪ ರಿಂದ ೫೪೮೫/೨೦೧೮ ಆದೇಶ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸದರಿ ಆದೇಶದ ಪ್ರಕಾರ ಪಿ.ಡಿ.ಓಗಳ ರಾಜ್ಯ ಜೇಷ್ಠತಾ ಪಟ್ಟಿ ತಯಾರಿಸಲಾಗಿದೆಯೇ; ಇಲ್ಲದಿದ್ದಲ್ಲಿ ಕಾರಣ ನೀಡುವುದು;

(ಊ) ಪಿ.ಡಿ.ಓ ಜೇಷ್ಠತಾ ಪಟ್ಟಿಯನ್ನು ಯಾರು ತಯಾರಿಸುತ್ತಾರೆ ಅವರ ಹೆಸರು ಮತ್ತು ಪದನಾಮ ತಿಳಿಸುವುದು; ಮತ್ತು ಜೇಷ್ಠತಾ ಪಟ್ಟಿ ತಯಾರಿಸದೆ ಇರಲು ಕಾರಣ ನೀಡುವುದು;

(ಋ) ಪಿ.ಡಿ.ಓ ಗಳ ಜೇಷ್ಠತಾ ಪಟ್ಟಿಗೆ ತಾತ್ಕಾಲಿಕ ತಡೆ ನೀಡಲು ಕಾರಣಗಳೇನು; ಈ ಕುರಿತು ಸರ್ಕಾರದ ನಿಲುವೇನು?

## ಸಂಯೋಜಿತ ಮಕ್ಕಳ ಅಭಿವೃದ್ಧಿ ಯೋಜನೆ (ICDS) ಹಾಗೂ ಮಹಿಳೆಯರ ಸಬಲೀಕರಣ ಮತ್ತು ರಕ್ಷಣೆ ಯೋಜನೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೧೯೬೧ (೨೨೭೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೇಂದ್ರ ಸರ್ಕಾರ ಪುರಸ್ಕೃತ ಮಹತ್ವಾಕಾಂಕ್ಷೆ ಯೋಜನೆಗಳಾದ ಸಂಯೋಜಿತ ಮಕ್ಕಳ ಅಭಿವೃದ್ಧಿ ಯೋಜನೆ (ICDS) ಹಾಗೂ ಮಹಿಳೆಯರ ಸಬಲೀಕರಣ ಮತ್ತು ರಕ್ಷಣೆ ಯೋಜನೆ ಅಡಿ ಕಳೆದ ೩ ವರ್ಷಗಳಲ್ಲಿ ಕೇಂದ್ರದಿಂದ ರಾಜ್ಯಕ್ಕೆ ದೊರಕಿರುವ ಆರ್ಥಿಕ ನೆರವೆಷ್ಟು; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಆರ್ಥಿಕ ನೆರವು ಕೇಂದ್ರ ಮತ್ತು ರಾಜ್ಯಗಳ ನಡುವೆ ಯಾವ ಅನುಪಾತದಲ್ಲಿ ನೀಡಲಾಗುತ್ತದೆ ಮತ್ತು ಈ ಯೋಜನೆಗಳ ಸ್ಥೂಲ ರೂಪು-ರೇಷೆಗಳೇನು; (ವಿವರ ನೀಡುವುದು)

(ಇ) ಕೇಂದ್ರ ಸರ್ಕಾರದ ಈ ಯೋಜನೆಗಳ ಅಡಿಯಲ್ಲಿ ದೊರೆತಿರುವ ಎಲ್ಲಾ ಆರ್ಥಿಕ ನೆರವನ್ನು ಪೂರ್ಣವಾಗಿ ಬಳಸಲಾಗಿದೆಯೇ; ಭೌತಿಕ-ಆರ್ಥಿಕ ಗುರಿ ಮತ್ತು ಸಾಧನೆಗಳೇನು ? (ಕಳೆದ ೩ ವರ್ಷಗಳ ವಿವರವನ್ನು ಒದಗಿಸುವುದು)

## ಅಶುಚಿತ್ವ, ಅಪೌಷ್ಠಿಕತೆ ಮತ್ತು ಅಶುದ್ಧ ಕುಡಿಯುವ ನೀರಿನಿಂದಾಗಿ ಶಿಶುಗಳ ಮರಣ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೧೯೬೨ (೨೨೮೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಇತ್ತೀಚಿನ ಯು.ಎನ್.ಒ (UNO) ಅಧ್ಯಯನ ವರದಿ ಪ್ರಕಾರ, ಭಾರತದಲ್ಲಿ ಅಶುಚಿತ್ವ, ಅಪೌಷ್ಠಿಕತೆ ಮತ್ತು ಅಶುದ್ಧ ಕುಡಿಯುವ ನೀರಿನಿಂದಾಗಿ ಪ್ರತಿ ೨ ನಿಮಿಷಗಳಲ್ಲಿ ಸರಾಸರಿ ಮೂರು ಶಿಶುಗಳು ಮರಣ ಹೊಂದುತ್ತಾರೆ ಎಂದು ವರದಿಯಿದ್ದು, ರಾಜ್ಯದಲ್ಲಿ ಇಂತಹ ಪರಿಸ್ಥಿತಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಶಿಶುಗಳ ಮರಣ ತಪ್ಪಿಸಲು ರೂಪಿಸಿರುವ ಯೋಜನೆಗಳು ಮತ್ತು ಕಾರ್ಯಕ್ರಮಗಳೇನು; (ವಿವರ ನೀಡುವುದು)

(ಆ) ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಶಿಶು ಕಲ್ಯಾಣಕ್ಕಾಗಿ ಇತ್ತೀಚಿನ ವರ್ಷಗಳಲ್ಲಿ ಸಂಯೋಜಿತ ಮಕ್ಕಳ ಅಭಿವೃದ್ಧಿ ಯೋಜನೆಗಳಿಗೆ ನೀಡುತ್ತಿರುವ ಅನುದಾನ ಕಡಿಮೆ ಆಗುತ್ತಿರುವುದು ನಿಜವೇ; ಹಾಗಿದ್ದಲ್ಲಿ, ಕಾರಣಗಳ ಸಮೇತ ಸಂಪೂರ್ಣ ವಿವರ ನೀಡುವುದು;

(ಇ) ರಾಜ್ಯದಲ್ಲಿ ಅಸಂಖ್ಯಾತ ಶಿಶು ಮರಣಕ್ಕೆ ಅಪೌಷ್ಠಿಕತೆ, ಅಶುಚಿತ್ವ ಮತ್ತು ಅಶುದ್ಧ ಕುಡಿಯುವ ನೀರು ಕಾರಣಗಳೆಂಬ ಅಂಶ ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಈ ಕೊರತೆಗಳನ್ನು ನೀಗಿಸಲು ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು)

## ರಾಜ್ಯದಲ್ಲಿನ ಖಾಸಗಿ ರೇಷ್ಮೆ ಚಾಕಿ ಸಾಕಾಣಿಕಾ ಕೇಂದ್ರಗಳ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೯೬೩ (೨೨೨೩) ಮಾನ್ಯ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜದಲ್ಲಿನ ಖಾಸಗಿ ರೇಷ್ಮೆ ಚಾಕಿ ಸಾಕಾಣಿಕಾ ಕೇಂದ್ರಗಳನ್ನು ತೆರೆಯಲು ಇರುವ ನಿಯಮಗಳೇನು; ರಾಜ್ಯ ಹಾಗೂ ಕೇಂದ್ರ ಸರ್ಕಾರದಿಂದ ಸದರಿ ಕೇಂದ್ರಗಳನ್ನು ಸ್ಥಾಪಿಸಲು ದೊರೆಯುತ್ತಿರುವ ನೆರವು, ಸಾಲ, ಸಹಾಯಧನ, ಪ್ರೋತ್ಸಾಹಧನ ಹಾಗೂ ಇತರೆ ಸೌಲಭ್ಯಗಳೇನು;

(ಆ) ರಾಜ್ಯದಲ್ಲಿ ಪ್ರಸ್ತುತ ಎಷ್ಟು ಖಾಸಗಿ ಚಾಕಿ ಸಾಕಾಣಿಕಾ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿವೆ; (ಹೆಸರು ಹಾಗೂ ವಿಳಾಸದೊಂದಿಗೆ ಸಂಪೂರ್ಣ ವಿವರ ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಖಾಸಗಿ ಚಾಕಿ ಸಾಕಾಣಿಕಾ ಕೇಂದ್ರಗಳು ಎಷ್ಟು ಚಾಕಿಯನ್ನು ರೈತರಿಗೆ ವಿತರಣೆ ಮಾಡಿವೆ? (ವರ್ಷವಾರು ಪ್ರತಿ ಖಾಸಗಿ ಚಾಕಿ ಸಾಕಾಣಿಕಾ ಕೇಂದ್ರದ ಸಂಪೂರ್ಣ ವಿವರ ನೀಡುವುದು)

## ತೋಟಗಾರಿಕಾ ಇಲಾಖೆಯಿಂದ ಹಮ್ಮಿಕೊಂಡ ಕಾರ್ಯಕ್ರಮಗಳ ಬಗ್ಗೆ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೬೪ (೨೨೪೭) ಮಾನ್ಯ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಕಳೆದ ೨ ವರ್ಷಗಳಿಂದ ತೋಟಗಾರಿಕಾ ಇಲಾಖೆಯ ವತಿಯಿಂದ ಹಮ್ಮಿಕೊಳ್ಳಲಾಗಿರುವ ಕಾರ್ಯಕ್ರಮಗಳಾವುವು;

(ಆ) ಕಳೆದ ೨ ವರ್ಷಗಳಲ್ಲಿ ತೋಟಗಾರಿಕೆ ಅಡಿಯಲ್ಲಿ ಬೆಳೆದ ಬೆಳೆಗಳು ಯಾವುವು; ಇವುಗಳಿಗೆ ನೀಡಿದ ಸಹಾಯ ಧನವೆಷ್ಟು;

(ಇ) ತೋಟಗಾರಿಕೆ ಇಲಾಖೆಯಿಂದ ವಿವಿಧ ಯೋಜನೆಗಳಿಂದ ಸಹಾಯಧನ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು? (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

## ಬಿಸ್ಕೂರು ಗ್ರಾಮಪಂಚಾಯ್ತಿ ಬಿಸ್ಕೂರು ವಾರ್ಡ್‌ನಲ್ಲಿ NAREGA ಯೋಜನೆ ಕುರಿತು

**ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು) :–**

೧೯೬೫ (೨೦೬೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಮನಗರ ಜಿಲ್ಲೆ, ಮಾಗಡಿ ತಾಲ್ಲೂಕು, ಕುದೂರು ಹೋಬಳಿ, ಬಿಸ್ಕೂರು ಗ್ರಾಮ ಪಂಚಾಯಿತಿ ಬಿಸ್ಕೂರು ವಾರ್ಡ್ ವ್ಯಾಪ್ತಿಯಲ್ಲಿ ೨೦೧೮-೧೯, ೨೦೧೯-೨೦ ಹಾಗೂ ೨೦೨೦-೨೧ನೇ ಸಾಲಿನಲ್ಲಿ ನರೇಗಾ ಯೋಜನೆಯಡಿ ನಿರ್ಮಾಣ ಮಾಡಿರುವ ಕುರಿ ಹಾಗೂ ಮೇಕೆ ಶೆಡ್‌ಗಳ ಸಂಖ್ಯೆ ಎಷ್ಟು; ಅದಕ್ಕಾಗಿ ಖರ್ಚಾಗಿರುವ ಅನುದಾನವೆಷ್ಟು;

(ಆ) ಕಾರ್ಯ ನಿರ್ವಹಿಸುತ್ತಿರುವ ಶೆಡ್‌ಗಳ ಸಂಖ್ಯೆ ಎಷ್ಟು; ಹಾಳಾಗಿರುವ ಶೆಡ್‌ಗಳೆಷ್ಟು;

(ಇ) ೨೦೧೭-೧೮, ೨೦೧೮-೧೯ ಹಾಗೂ ೨೦೧೯-೨೦ನೇ ಸಾಲಿನಲ್ಲಿ ನರೇಗಾ ಯೋಜನೆಯಡಿ ಸದರಿ ವಾರ್ಡ್ ವ್ಯಾಪ್ತಿಗೆ ನಿರ್ಮಾಣ ಮಾಡಿರುವ ಕುರಿ ಹಾಗೂ ಮೇಕೆ ಶೆಡ್‌ಗಳ ನಿರ್ವಹಣೆಗೆ ಹಂಚಿಕೆಯಾಗಿರುವ ಮೊತ್ತವೆಷ್ಟು;

(ಈ) ಶೆಡ್‌ಗಳಿಗಾಗಿ ಬಿಡುಗಡೆಯಾದ ಹಣವನ್ನು ಇನ್ನಿತರೆ ಕಾರ್ಯಗಳಿಗೆ ಬಳಕೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಇದನ್ನು ತಡೆಯಲು ಕೈಗೊಂಡ ಕ್ರಮಗಳೇನು;

(ಉ) ಸದರಿ ಶೆಡ್‌ಗಳಲ್ಲಿ ಜಾನುವಾರುಗಳನ್ನು ಸಾಕಾಣಿಕೆ ಮಾಡುವ ಬದಲು ಇನ್ನಿತರೆ ಚಟುವಟಿಕೆಗಳಿಗಾಗಿ ಬಳಸಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದನ್ನು ತಡೆಯಲು ಕೈಗೊಂಡ ಕ್ರಮಗಳೇನು?

## NAREGA ಯೋಜನೆಯಡಿ ಕೃಷಿ ಹೊಂಡಾ ಕುರಿತು

**ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು) :-**

೧೯೬೬ (೨೦೬೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಮನಗರ ಜಿಲ್ಲೆ, ಮಾಗಡಿ ತಾಲ್ಲೂಕು, ಕುದೂರು ಹೋಬಳಿ, ಬಿಸ್ಕೂರು ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಬರುವ ಬಿಸ್ಕೂರು, ರಾಮನಗರ ಜಿಲ್ಲೆ, ಮಾಗಡಿ ತಾಲ್ಲೂಕು, ಕುದೂರು ಹೋಬಳಿ, ಬಿಸ್ಕೂರು ಗ್ರಾಮ ಪಂಚಾಯಿತಿ ಬಿಸ್ಕೂರು ವಾರ್ಡ್‌ಗೆ ೨೦೧೮-೧೯, ೨೦೧೯-೨೦ ಹಾಗೂ ೨೦೨೦-೨೧ನೇ ಸಾಲಿನಲ್ಲಿ ನರೇಗಾ ಯೋಜನೆಯಡಿ ನಿರ್ಮಾಣ ಮಾಡಿರುವ ಕೃಷಿ ಹೊಂಡಾಗಳ ಸಂಖ್ಯೆ ಎಷ್ಟು; ಅದಕ್ಕಾಗಿ ಖರ್ಚಾಗಿರುವ ಅನುದಾನವೆಷ್ಟು;

(ಆ) ಕೃಷಿ ಹೊಂಡಗಳ ನಿರ್ಮಾಣಕ್ಕಾಗಿ ಗೋಮಾಳ ಭೂಮಿಯನ್ನು ಬಳಸಿಕೊಂಡಿದ್ದರೂ ಸಹ ಅನುದಾನ ಬಿಡುಗಡೆ ಮಾಡಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಸದರಿ ಅಕ್ರಮ ತಡೆಯಲು ಕೈಗೊಂಡ ಕ್ರಮಗಳೇನು; ದಾಖಲಾತಿಗಳನ್ನು ಒದಗಿಸುವುದು;

(ಇ) ಸದರಿ ಬಿಸ್ಕೂರು ವಾರ್ಡ್ ವ್ಯಾಪ್ತಿಯಲ್ಲಿ ಕೃಷಿ ಹೊಂಡಾಗಳಿಗೆ ಸಂಪೂರ್ಣ ಮೊತ್ತ ಬಿಡುಗಡೆಯಾದವರ ವಿವರ ಒದಗಿಸುವುದು;

(ಈ) ಕೃಷಿ ಹೊಂಡಗಳ ಕಾಮಗಾರಿ ಸಂಪೂರ್ಣಗೊಳ್ಳದಿದ್ದರೂ ಸಹ ಹಣ ಬಿಡುಗಡೆ ಮಾತ್ರ ಪೂರ್ಣ ಮಟ್ಟದಲ್ಲಿ ಅಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ? (ಗ್ರಾಮವಾರು ವಿವರ ನೀಡುವುದು)

## ಸಹಾಯಕ ತೋಟಗಾರಿಕೆ ಅಧಿಕಾರಿಗಳ ನೇಮಕಾತಿ ವಿಳಂಬವಾಗುತ್ತಿರುವ ಬಗ್ಗೆ

**ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು) :–**

೧೯೬೭ (೨೨೫೪) ಮಾನ್ಯ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಲೋಕಸೇವಾ ಆಯೋಗದ ವತಿಯಿಂದ ತೋಟಗಾರಿಕೆ ಇಲಾಖೆಯಲ್ಲಿನ ಸಹಾಯಕ ತೋಟಗಾರಿಕೆ ಅಧಿಕಾರಿಗಳ ೨೨೧+೯೯ (ಹೈ.ಕ) ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ದಿನಾಂಕ:೧೯–೦೧–೨೦೨೧ ರಂದು ಅಂತಿಮ ಆಯ್ಕೆಪಟ್ಟಿಯನ್ನು

ಪ್ರಕಟಿಸಿ, ತತ್ಸಂಬಂಧ ನೇಮಕಾತಿ ಪ್ರಾಧಿಕಾರವಾದ ನಿರ್ದೇಶಕರು ತೋಟಗಾರಿಕೆ ಇಲಾಖೆ, ಲಾಲ್‌ಬಾಗ್ ಬೆಂಗಳೂರು ಇವರಿಗೆ ಸಲ್ಲಿಸಿದ್ದರೂ ಸಹ ನೇಮಕಾತಿಗೆ ವಿಳಂಬವಾಗುತ್ತಿರುವುದಕ್ಕೆ ಕಾರಣವೇನು;

(ಆ) ಯಾವ ಕಾಲಮಿತಿಯೊಳಗೆ ನೇಮಕಾತಿ ಮಾಡಿಕೊಳ್ಳಲಾಗುವುದು ? (ಸಂಪೂರ್ಣ ವಿವರ ನೀಡುವುದು)

## ಕಲಬುರಗಿ ಜಿಲ್ಲೆಯ ಕೇಂದ್ರ ಬಸ್ ನಿಲ್ದಾಣದ ಬಗ್ಗೆ

**ಶ್ರೀ ಶಶಿಲ್ ಜಿ ನಮೋಶಿ (ಶಿಕ್ಷಕರ ಕ್ಷೇತ್ರ) :–**

೧೯೬೮ (೨೨೯೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಜಿಲ್ಲೆಯ ಕೇಂದ್ರ ಬಸ್ ನಿಲ್ದಾಣದ ವ್ಯಾಪ್ತಿಯೊಳಗೆ ಬರುವ ಅಂಗಡಿ ಹೊಟೇಲ್ (ಮಳಿಗೆಗಳು)ಗಳ ಸಂಖ್ಯೆ ಎಷ್ಟು;

(ಆ) ಸದರಿ ವ್ಯಾಪ್ತಿಯೊಳಗಿನ ವಾಣಿಜ್ಯ ಮಳಿಗೆ (ಕಾಂಪ್ಲೆಕ್ಸ್) ಯ ಒಟ್ಟು ಅಂಗಡಿಗಳು ಎಷ್ಟು; ಅವುಗಳಿಗೆ ಸರ್ಕಾರ ವಿಧಿಸುತ್ತಿರುವ ಬಾಡಿಗೆ ದರ ಎಷ್ಟು; ಸರ್ಕಾರ ನಿಗಧಿಪಡಿಸಿದ ಠೇವಣಿ ದರವೆಷ್ಟು;

(ಇ) ಹಾಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಅಂಗಡಿಗಳ ಬಾಡಿಗೆ ಅವಧಿ ಮುಕ್ತಾಯವಾಗುವ ಬಗ್ಗೆ ಸಂಪೂರ್ಣ ಮಾಹಿತಿಯನ್ನು ನೀಡುವುದು ;

(ಈ) ಇವುಗಳನ್ನು ಬಾಡಿಗೆಗೆ ನೀಡುವಾಗ ಸರ್ಕಾರ ಅನುಸರಿಸುವ ನಿಯಮ ಹಾಗೂ ಮಾನದಂಡಗಳೇನು ?

## ಚಾಮರಾಜನಗರದಲ್ಲಿ ನೂತನ ಹೈಟೆಕ್ ಬಸ್ ನಿಲ್ದಾಣ ಸ್ಥಾಪನೆ ಬಗ್ಗೆ

**ಶ್ರೀ ಎಸ್. ನಾಗರಾಜ್(ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೬೯ (೨೨೪೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಾಮರಾಜನಗರವು ಅಭಿವೃದ್ಧಿ ಹೊಂದುತ್ತಿರುವ ಜಿಲ್ಲಾ ಕೇಂದ್ರವಾಗಿದ್ದು, ಕರ್ನಾಟಕ ಹಾಗೂ ತಮಿಳುನಾಡು ಸಾರಿಗೆ ಸಂಸ್ಥೆಗಳ ಹೆಚ್ಚಿನ ಬಸ್ ಸಂಚಾರ ಇರುವುದರಿಂದ, ಮುಂದಿನ ಬೆಳವಣಿಗೆಯನ್ನು ದೃಷ್ಟಿಯಲ್ಲಿಟ್ಟುಕೊಂಡು, ಒಂದು ಹೈಟೆಕ್ ಬಸ್ ನಿಲ್ದಾಣ ಸ್ಥಾಪಿಸುವ ವಿಷಯ ಸರ್ಕಾರದ ಪರೀಶೀಲನೆಯಲ್ಲಿದೆಯೇ; ಈ ಬಗ್ಗೆ ಸರ್ಕಾರ ಗಮನಹರಿಸುವುದೇ ;

(ಆ) ಹಾಲಿ ಇರತಕ್ಕ ಬಸ್ ನಿಲ್ದಾಣ ಬಹಳ ಕಿರಿದಾಗಿದ್ದು, ಸಂತೇಮರಹಳ್ಳಿ ರಸ್ತೆಯಲ್ಲಿರುವ ರೇಷ್ಮೆ ಇಲಾಖೆಯ ಕಟ್ಟಡ ಮತ್ತು ಜಾಗವನ್ನು ವಶಕ್ಕೆ ತೆಗೆದುಕೊಂಡು ಈ ಸ್ಥಳದಲ್ಲಿ ಒಂದು ಹೈಟ್‌ಕ್ ಬಸ್ ನಿಲ್ದಾಣ ಸ್ಥಾಪಿಸಲು ಕ್ರಮ ವಹಿಸಲಾಗುವುದೇ ?

## ಚಾಮರಾಜನಗರದಲ್ಲಿ ಅರಿಶಿನ ಸಂಸ್ಕರಣಾ ಘಟಕ ಸ್ಥಾಪನೆ ಬಗ್ಗೆ

**ಶ್ರೀ ಎಸ್. ನಾಗರಾಜ್(ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೭೦ (೨೨೪೨) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಾಮರಾಜನಗರ ಜಿಲ್ಲೆಯಲ್ಲಿ ಎಷ್ಟು ಹೆಕ್ಟೇರ್‌ಗಳಲ್ಲಿ ಅರಿಶಿನ ಬೆಳೆಯುತ್ತಾರೆ ; ವಾರ್ಷಿಕ ಉತ್ಪಾದನೆ ಅಂದಾಜು ಪ್ರಮಾಣ ಎಷ್ಟು ; ಅರಿಶಿನಕ್ಕೆ ವ್ಯವಸ್ಥಿತ ಮಾರುಕಟ್ಟೆಯ ಸೌಲಭ್ಯ ಕಲ್ಪಿಸಲಾಗಿದೆಯೇ ;

(ಆ) ಚಾಮರಾಜನಗರದಲ್ಲಿ ಅರಿಶಿನ ಸಂಸ್ಕರಣಾ ಘಟಕವನ್ನು ಸ್ಥಾಪಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ?

## ಮಹಾತ್ಮಗಾಂಧಿ ಉದ್ಯೋಗ ಖಾತ್ರಿ ಯೋಜನೆಯಡಿ ಸಾಮಾಗ್ರಿ ಬಿಲ್ಲು ಆಗದೇ ಇರುವ ಬಗ್ಗೆ

**ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೭೧ (೨೨೪೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೮–೧೯ ಮತ್ತು ೨೦೧೯–೨೦ನೇ ಸಾಲಿನ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಸಾಮಾಗ್ರಿ ಬಿಲ್ಲು ನಿಗಧಿತ ಅವಧಿಯಲ್ಲಿ ಸಂದಾಯವಾಗದೇ ಇರುವುದರಿಂದ ಸಾಮಗ್ರಿ ಆಧಾರಿತ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಸಾಧ್ಯವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸಾಮಾಗ್ರಿ ಬಿಲ್ಲನ್ನು ಸಂದಾಯ ಮಾಡಲು ಗ್ರಾಮ ಪಂಚಾಯತಿಗಳಿಗೆ ಕೂಡಲೇ ಅನುದಾನ ಬಿಡುಗಡೆಗೊಳಿಸಲು ಸರ್ಕಾರವು ಕೈಗೊಂಡ ಕ್ರಮಗಳೇನು ?

## ಗ್ರಾಮ ಪಂಚಾಯತಿ ಸಿಬ್ಬಂದಿಗಳ ವೇತನ ಕುರಿತು

**ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೭೨ (೨೨೪೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮ ಪಂಚಾಯತಿ ಸಿಬ್ಬಂದಿಗಳಿಗೆ ಮಾಸಿಕ ವೇತನವು ನಿಗಧಿತ ಅವಧಿಯಲ್ಲಿ ಸಂದಾಯವಾಗದೇ ಇರುವುದರಿಂದ ಸಿಬ್ಬಂದಿಗಳು ಆರ್ಥಿಕ ಸಮಸ್ಯೆ ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸದರಿ ಸಿಬ್ಬಂದಿಗಳಿಗೆ ಮಾಸಿಕ ವೇತನ ಸಂದಾಯಕ್ಕಾಗಿ ಸರ್ಕಾರವು ಕೈಗೊಂಡ ಕ್ರಮಗಳೇನು ?

## ತಾಲ್ಲೂಕು ಪಂಚಾಯತಿಗಳಲ್ಲಿ ಖಾಲಿಯಿರುವ ಸಹಾಯಕ ನಿರ್ದೇಶಕರ ಹುದ್ದೆ ಭರ್ತಿ ಕುರಿತು

**ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೭೩ (೨೨೪೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತಾಲ್ಲೂಕು ಪಂಚಾಯತಿಗಳಲ್ಲಿ ಸಹಾಯಕ ನಿರ್ದೇಶಕರ ಹುದ್ದೆ ಖಾಲಿಯಿರುವುದರಿಂದ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯನ್ನು ಅನುಷ್ಠಾನಗೊಳಿಸುವಲ್ಲಿ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ತಾಲ್ಲೂಕು ಪಂಚಾಯತಿಗಳಲ್ಲಿ ಖಾಲಿಯಿರುವ ಸಹಾಯಕ ನಿರ್ದೇಶಕರ ಹುದ್ದೆಯನ್ನು ಭರ್ತಿ ಮಾಡಲು ಸರ್ಕಾರವು ಕೂಡಲೇ ಕ್ರಮಕೈಗೊಳ್ಳುವುದೇ ?

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0221/500 ಪ್ರತಿಗಳು/19–03–2021